# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 168 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 17–01–2024 ಬುಧವಾರ | ಪುಟ: 4 | ಬೆಲೆ : ರೂ.2–00

Volume - 01 Issue - 168 | Title- Code: KARKAN 28269 | Chitradurga | Date: 17-01-2024 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ರಾಜ್ಯ ಸರ್ಕಾರದಿಂದ ಕುಲ ಕಸುಬುಗಳ ನಿರ್ಲಕ್ಷ್ಯ: ಸ್ವಾಮೀಜಿ 2

ಗ್ರಾಮಗಳ ಸಮಸ್ಯೆಗಳನ್ನು ಕೂಡಲೇ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚನೆ 3

ಜಾತಿ ಲೆಕ್ಕಚಾರದಲ್ಲಿ ಹನುಮಂತೇಗೌಡಗೆ ಒಲಿದ ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷ ಸ್ಥಾನ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಗೊಂದಲದ ಓಟಕ್ಕಿಂತ ಆತ್ಮವಿಶ್ವಾಸದ ನಡಿಗೆ ಹೆಚ್ಚು ಯಶಸ್ವಿಯಾಗುತ್ತದೆ. ಯಾರನ್ನೂ ಅನುಸರಿಸಬೇಡಿ, ಆದರೆ ಎಲ್ಲರಿಂದ ಕಲಿಯಿರಿ. ನಾನೇನು ಮಾಡಬಲ್ಲೆ ಎಂದು ಎದೆ ಗುಂದದೆ ಅದನ್ನು ಮಾಡಬಲ್ಲೆ ಎಂಬ ನಂಬಿಕೆಯಿಂದ ಪ್ರಯತ್ನಿಸಿದರೆ ನಾವು ಏನನ್ನಾದರೂ ಸಾಧಿಸಬಹುದು

## ಕೆಡಿಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ

# ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳಿಗೆ ನೀರಿನ ತೊಂದರೆಯಾಗದಂತೆ ಕ್ರಮ ವಹಿಸಿ

» ಚಿತ್ರದುರ್ಗ

ಜಿಲ್ಲೆಯಲ್ಲಿ ಬರುವ ಬೇಸಿಗೆಯಲ್ಲಿ ಅಂದಾಜು 278 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವವಾಗುವ ಸಾಧ್ಯತಗಳಿದ್ದು, ಇಂತಹ ಸಮಸ್ಯಾತ್ಮಕ ಗ್ರಾಮಗಳಲ್ಲಿ ಬೇಸಿಗೆಯಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ, ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಜಿಲ್ಲಾ ಪಂಚಾಯಿತಿ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರ ಬಸನಗೌಡ ಪಾಟೀಲ್ ಮಾತನಾಡಿ, ಜಿಲ್ಲೆಯಲ್ಲಿ ಬೇಸಿಗೆ ಸಂದರ್ಭದಲ್ಲಿ ಹೊಸದುರ್ಗ ತಾಲ್ಲೂಕಿನಲ್ಲಿ 36, ಚಳ್ಳಕೆರೆ–32, ಚಿತ್ರದುರ್ಗ–43, ಮೊಳಕಾಲ್ಮೂರು–67, ಹಿರಿಯೂರು–57 ಹಾಗೂ ಹೊಳಲ್ಕೆರೆ–43 ಸೇರಿದಂತೆ ಒಟ್ಟು 278 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರುವ ಸಂಭವವಿದೆ. ಹೀಗಾಗಿ ಜಲಜೀವನ್ ಮಿಷನ್ ಯೋಜನೆಯಡಿ ಕುಡಿಯುವ ನೀರು ಪೂರೈಕೆ ಮಾಡಲು ಈಗಾಗಲೆ ಯೋಜನೆಗಳನ್ನು ರೂಪಿಸಲಾಗಿದೆ ಎಂದರು. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಮಾತನಾಡಿ, ಬರ ಪರಿಸ್ಥಿತಿಯ ತುರ್ತು ನಿರ್ವಹಣೆಗಾಗಿ ಜಿಲ್ಲೆಗೆ ಈಗಾಗಲೆ 09 ಕೋಟಿ ರೂ. ಬಿಡುಗಡೆಯಾಗಿದೆ. ಇದರಲ್ಲಿ ಮೇವು ಪೂರೈಕೆ, ಟ್ಯಾಂಕರ್ ಮೂಲಕ ನೀರು ಸರಬರಾಜು, ಖಾಸಗಿ ಬೋರ್‌ವೆಲ್ ಬಾಡಿಗೆಗೆ ಪಡೆಯುವುದು ಹಾಗೂ ತುರ್ತು ಪೈಪ್‌ಲೈನ್ ಕಾಮಗಾರಿಗಳಿಗೆ ಹಾಗೂ ತಾತ್ಕಾಲಿಕ ಪರಿಹಾರ ಕಾರ್ಯಗಳಿಗೆ ವಿನಿಯೋಗಿಸಿ, ಬರ ಪರಿಸ್ಥಿತಿ ನಿರ್ವಹಿಸಲಾಗುವುದು ಎಂದರು. ಜಿಲ್ಲಾ ಉಸ್ತುವಾರಿ ಸಚಿವರು ಪ್ರತಿಕ್ರಿಯಿಸಿ, ಬೇಸಿಗೆಯಲ್ಲಿ ಯಾವುದೇ ಕಾರಣಕ್ಕೂ ಜನರಿಗೆ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಗತ್ಯ ಇರುವ ಕಡೆಗಳಲ್ಲಿ ಬೋರ್‌ವೆಲ್ ಕೊರೆಯಿಸಬೇಕು ಎಂದು ಸೂಚನೆ ನೀಡಿದರು.

ಪುಟ 3





### ಗೋಶಾಲೆ ಪ್ರಾರಂಭಕ್ಕೆ ಸಿದ್ಧತೆಗೆ ಸೂಚನೆ

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಸಬಾ, ದೊಡ್ಡ ಉಳ್ಳಾರ್ತಿ, ಪರಶುರಾಂಪುರ ಹೋಬಳಿಯ ಚೌಳೂರು, ಹಿರೇಕೆರೆ ಕಾವಲು, ತುರುವನೂರು ಹೋಬಳಿಯ ಬೆಳಗಟ್ಟ ಸೇರಿದಂತೆ ಚಳ್ಳಕೆರೆ ಕ್ಷೇತ್ರ ವ್ಯಾಪ್ತಿಯಲ್ಲಿ ಒಟ್ಟು 5 ಗೋಶಾಲೆ ಪ್ರಾರಂಭಕ್ಕೆ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಶಾಸಕ ಟಿ.ರಘುಮೂರ್ತಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲೆಯಲ್ಲಿರುವ ದೇವರ ಎತ್ತುಗಳಿಗೆ ಮೇವು ಒದಗಿಸಲು ತಿಂಗಳಿಗೆ ರೂ.22 ಲಕ್ಷ ಅನುದಾನದ ಅವಶ್ಯಕತೆ ಇದೆ ಎಂದು ಸರ್ಕಾರದ ಗಮನಕ್ಕೆ ತಂದ ದೇವರ ಎತ್ತುಗಳ ಮೇವಿಗೆ ಸರ್ಕಾರದಿಂದ ರೂ.10 ಲಕ್ಷ ಅನುದಾನ ಮಂಜೂರಾಗಿದ್ದು, ಮೇವು ಪೂರೈಕೆ ಮಾಡಲಾಗಿದೆಯೇ ಎಂದು ಶಾಸಕ ರಘುಮೂರ್ತಿ ಪ್ರಶ್ನಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಪಶುಸಂಗೋಪನೆ ಇಲಾಖೆ ಉಪನಿರ್ದೇಶಕ ಡಾ. ಬಾಬುರತ್ನ ಅವರು ಈಗಾಗಲೆ 02 ಲೋಡ್ ಮೇವು ದೇವರ ಎತ್ತುಗಳಿಗಾಗಿ ಪೂರೈಕೆ ಮಾಡಲಾಗಿದೆ ಎಂದರು. ಮೇವು ಪೂರ್ಯಕೆ ಕುರಿತು ಶಾಸಕರ ಗಮನಕ್ಕೆ ತಾರದೇ ಇರುವುದಕ್ಕೆ ರಘುಮೂರ್ತಿ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಅಲ್ಲದೆ ತಡಮಾಡದೇ ಶೀಘ್ರವೇ ಮೇವು ಪೂರೈಕೆಗೆ ಕ್ರಮವಹಿಸಬೇಕು ಎಂದು ಉಪನಿರ್ದೇಶಕರಿಗೆ ಸೂಚನೆ ನೀಡಿದರು.

ಗೋಶಾಲೆಗಳ ಸಮರ್ಪಕ ನಿರ್ವಹಣೆಗೆ ಕಂದಾಯ ಇಲಾಖೆಯ ರಾಜಸ್ವ ನಿರೀಕ್ಷಕರು ಹಾಗೂ ಗ್ರಾಮಲೆಕ್ಕಾಧಿಕಾರಿಯನ್ನು ನಿಯುಕ್ತಿಗೊಳಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಆಮ್ಲಾನ್ ಆದಿತ್ಯ ಬಿಸ್ವಾಸ್ ಸಲಹೆ ನೀಡಿದರು.

### ಅಡಿಕೆ ಬೆಳೆಗಾರರಿಗೆ ಪ್ರೋತ್ಸಾಹ ಧನ

ಜಿಲ್ಲೆಯ ಅಡಿಕೆ ಬೆಳೆಗಾರರಿಗೆ ಸರ್ಕಾರದಿಂದ ಪ್ರೋತ್ಸಾ ಹಧನಕ್ಕೆ ಸಂಬಂಧಪಟ್ಟಂತೆ ಯಾವ ಕ್ರಮವಹಿಸಲಾಗಿದೆ ಎಂಬ ಶಾಸಕ ಟಿ.ರಘುಮೂರ್ತಿ ಅವರ ಪ್ರಶ್ನೆಗೆ ಉತ್ತರಿಸಿದ ತೋಟಗಾರಿಕೆ ಉಪನಿರ್ದೇಶಕಿ ಸವಿತಾ ಅವರು, ಪ್ರಸ್ತುತ ಅಡಿಕೆ ಬೆಳೆಯನ್ನು ಬೆಳೆಯುತ್ತಿರುವ ಮಲೆನಾಡು ಮತ್ತು ಕರಾವಳಿ ಜಿಲ್ಲೆಗಳಲ್ಲಿ ಮಾತ್ರ ಹನಿ ನೀರಾವರಿ ಘಟಕ ಅಳವಡಿಕೆಗೆ ಸಹಾಯಧನ ನೀಡಲಾಗುತ್ತಿದ್ದು, ಇತರೆ ಪ್ರದೇಶಗಳಲ್ಲಿ ಅಡಿಕೆ ಬೆಳೆಯುವ ರೈತರಿಗೆ ಹನಿ ನೀರಾವರಿ ಅಡಿ ಸಹಾಯಧನ ಪಡೆಯಲು ಮಾರ್ಗಸೂಚಿಯಲ್ಲಿ ಅವಕಾಶ ಕಲ್ಪಿಸಿರುವುದಿಲ್ಲ ಎಂದರು. ಜಿಲ್ಲೆಯ ಜನಪ್ರತಿನಿಧಿಗಳ ಸೂಚನೆಯಂತೆ, ಜಿಲ್ಲೆಯ ಅಡಿಕೆ ಬೆಳೆಗಾರರಿಗೂ ಸರ್ಕಾರದಿಂದ ಪ್ರೋತ್ಸಾಹಧನ ಲಭ್ಯವಾಗುವಂತಾಗಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಕಳೆದ ನ. 29 ರಂದು ತೋಟಗಾರಿಕೆ ಸಚಿವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಈ ಬಗ್ಗೆ ಚರ್ಚಿಸಲಾಗಿದ್ದು, ಸಚಿವರು ಒಪ್ಪಿಗೆ ನೀಡಿದ್ದಾರೆ. ಶೀಘ್ರವೇ ಸರ್ಕಾರ ಇದಕ್ಕೆ ಅನುಮೋದನೆ ನೀಡುವ ನಿರೀಕ್ಷೆ ಇದೆ ಎಂದರು. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಮ್ಲಾನ್ ಆದಿತ್ಯ ಬಿಸ್ವಾಸ್ ಅವರು, ಹನಿ ನೀರಾವರಿ ಹಾಗೂ ನರೇಗಾ ಯೋಜನೆಯಡಿ ಸಿಗುವ ಸಹಾಯಧನದಂತೆ ಜಿಲ್ಲೆಯ ಅಡಿಕೆ ಬೆಳೆಗೂ ಒದಗಿಸಬೇಕು ಎಂಬ ಕುರಿತು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾಗಿದ್ದು, ಶೀಘ್ರ ಈ ಬಗ್ಗೆ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆಯಾಗುವ ನಿರೀಕ್ಷೆ ಇದೆ ಎಂದು ತಿಳಿಸಿದರು.

## ಫಾಸ್ಟ್ ನ್ಯೂಸ್

### 21ರಂದು ರಾಜ್ಯಮಟ್ಟದ ಸರ್ವಧರ್ಮೀಯ ವಧು ವರರ ಸಮಾವೇಶ

» ಚಿತ್ರದುರ್ಗ

ಚಿತ್ರದುರ್ಗದ ಬಸವೇಶ್ವರ ವಧು ವರರ ಮಾಹಿತಿ ಕೇಂದ್ರದ ವತಿಯಿಂದ ರಾಜ್ಯಮಟ್ಟದ ಸರ್ವಧರ್ಮ ವಧು ವರರ ಸಮಾವೇಶವನ್ನು ಇದೇ ತಿಂಗಳ 21ರಂದು ಭಾನುವಾರ ಹಮ್ಮಿಕೊಳ್ಳಲಾಗಿದೆ ಎಂದು ಮಾಹಿತಿ ಕೇಂದ್ರದ ಸಂಚಾಲಕ ಹಾಗೂ ವ್ಯವಸ್ಥಾಪಕರೂ ಆದ ಜೆ.ಎಂ. ಜಂಬಯ್ಯ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಈ ತಿಂಗಳ 22ನೇ ತಾರೀಕು ಬೆಳಿಗ್ಗೆ 11ಗಂಟೆಗೆ ಭಾನುವಾರ ಬೆಂಗಳೂರಿನ ಗಾಂಧಿನಗರದ, ಎರಡನೇ ಮುಖ್ಯ ರಸ್ತೆಯಲ್ಲಿರುವ ಮಹಾರಾಷ್ಟ್ರ ಮಂಡಳದ ಸಭಾಂಗಣದಲ್ಲಿ ನಡೆಯಲಿದೆ. ಸಮಾವೇಶದ ದಿವ್ಯ ಸಾನಿಧ್ಯವನ್ನು ಬೆಂಗಳೂರು ಸರ್ಪ ಭೂಷಣ ಶಿವಯೋಗಿಗಳ ಮಠದ ಶ್ರೀ ಮಲ್ಲಿಕಾರ್ಜುನ ಮಸ್ವಾಮಿಗಳವರು ಹಾಗೂ ಬೆಳಗಾವಿ ಜಿಲ್ಲೆ ಶಿರಸಂಗಿ ಮಹಲಿಂಗೇಶ್ವರಮಠದ ಶ್ರೀಬಸವ ಮಹಾಂತ ಮಹಾಸ್ವಾಮಿಗಳು ವಹಿಸಲಿದ್ದಾರೆಂದು ತಿಳಿಸಿದ್ದಾರೆ.ಈ ಮಾಹಿತಿ ಕೇಂದ್ರವು ಕಳೆದ 1996–97ನೇ ಇಸವಿಯಿಂದ ಪ್ರಾರಂಭಗೊಂಡು ಇಲ್ಲಿಯವರೆಗೂ ಇಂತಹ ಸಮಾವೇಶಗಳನ್ನು ರಾಜ್ಯದ ವಿವಿಧಡೆ ನಡೆಸಿ ಹಲವರಿಗೆ ಸಹಕಾರಿಯಾಗಿದೆ ಎಂದಿರುವ ಅವರು ಒಂದು ಜಾತಿ,,ಜನಾಂಗ, ಧರ್ಮದವರಿಗೆ ಮಾತ್ರ ಸೀಮಿತವಾಗಿರದೆ ಎಲ್ಲರನ್ನೊಳಗೊಂಡ ವಧು ಹಾಗೂ ವರರ, ಪರಸ್ಪರ, ಭೇಟಿ ಚರ್ಚೆ ನಡೆದು ಮುಂದೆ ಒಪ್ಪಿಕೊಂಡು ಕಲ್ಯಾಣ ಮಹೋತ್ಸವಗಳುನಡೆಯಲು ಒಂದು ವೇದಿಕೆಯಾಗಿದೆ ,ಎಷ್ಟೋ ಮದುವೆಗಳು ಈಗಾಗಲೇ ನಡೆದಿವೆ.ಇದರ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಲು ಮನವಿ ಮಾಡಿದ್ದಾರೆ. ಹೆಚ್ಚಿನ ಮಾಹಿತಿಗಾಗಿಜೆ.ಎಂ.ಜಂಬಯ್ಯ,ಸಂಚಾಲಕರು,ಮೊಬೈಲ್ 9980658625 ಸಂಪರ್ಕಿಸಲು ಕೋರಿದ್ದಾರೆ.

### ರಾಷ್ಟ್ರೀಯ ಯುವ ದಿನಾಚರಣೆ ನಾಳೆ

» ಚಿತ್ರದುರ್ಗ

ಭಾರತ ಸರ್ಕಾರ Ministry of youth Affairs and Sports ನೆಹರು ಯುವ ಕೇಂದ್ರ ಚಿತ್ರದುರ್ಗ ಮತ್ತು ಮದಕರಿ ಯುವಕ ಸಂಘ (ರಿ) ಚಿತ್ರದುರ್ಗ ಇವುಗಳ ಸಂಯುಕ್ತಾಶ್ರಯದಲ್ಲಿ ಜ.18 ನೇ ಗುರುವಾರ 11.30ಕ್ಕೆ ರಾಷ್ಟ್ರೀಯ ಯುವ ದಿನಾಚರಣೆ ಹಾಗೂ ಯುವ ಸಪ್ತಾಹ ಮತ್ತು SKILL DEVELOPMENT DAY ಕಾರ್ಯಕ್ರಮವನ್ನು ಬಸವೇಶ್ವರ ಟಾಕೀಸ್ ರಸ್ತೆಯ ಸಿಲಿಕಾನ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಇಲ್ಲಿ ಹಮ್ಮಿಕೊಳ್ಳಲಾಗಿದೆ. ಉದ್ಘಾಟನೆಯನ್ನು ಅಹೋಬಲ ಟಿ.ವಿ.ಎಸ್ ಹಾಗೂ ಅಹೋಬಲ ಸ್ಟೀಲ್ಸ್ ಮತ್ತು ಸಿಮೆಂಟ್ಸ್ ಮ್ಯಾನೇಜಿಂಗ್ ಡೈರೆಕ್ಟರ್ ಅರುಣ್‌ಕುಮಾರ್ ಪಿ.ವಿ ನೆರವೇರಿಸುವರು,ಅಧ್ಯಕ್ಷತೆಂ ಮನ್ನು ಸಿಲಿಕಾನ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಸಂಸ್ಥಾಪಕರಾದ ಡಿ ಗೋಪಾಲಸ್ವಾಮಿ ನಾಯಕ ವಹಿಸುವರು,ಉಪನ್ಯಾಸವನ್ನು ಕಂಪ್ಯೂಟರ್ ತರಬೇತಿದರಾದ ಜಾವಿದ್ ನೀಡುವರು ಮುಖ್ಯ ಅತಿಥಿಗಳಾಗಿ ಕೇಂದ್ರ ಭಾರತ ಸರ್ಕಾರದ ನೆಹರು ಯುವ ಕೇಂದ್ರದ ಜಿಲ್ಲಾ ಯವಜನ ಅಧಿಕಾರಿಗಳು ಸುಹಾಸ್ ಎನ್ ಆಗಮಿಸುವರು ಎಂದು ಮದಕರಿ ಯುವಕ ಸಂಘದ ಅಧ್ಯಕ್ಷರಾದ ಕೆ ಸೋಮಶೇಖರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನೇಮಕ

» ಚಿತ್ರದುರ್ಗ

ಕರ್ನಾಟಕ ದಲಿತ ಸಂಘರ್ಷ ಸಮಿತಿ ದಾದಾಸಾಹೇಬ್ ಡಾ.ಎನ್.ಮೂರ್ತಿ ಸ್ಥಾಪಿತ ಸಂಘಟನೆಯ ಹೊಸದುರ್ಗ ತಾಲ್ಲೂಕು ಅಧ್ಯಕ್ಷರಾಗಿ ಕರಿಬಸಪ್ಪ ಓ.
ಇವರನ್ನು ನೇಮಕ ಮಾಡಲಾಗಿದೆ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ ಜಿಲ್ಲಾಧ್ಯಕ್ಷ ಸಿ.ಹೆಚ್.ಮಂಜುನಾಥ್ ತಿಳಿಸಿದ್ದಾರೆ.

## ಬಸ್ಸಿಗಾಗಿ ಕಾದು ಕುಳಿತಿದ್ದ ವಿದ್ಯಾರ್ಥಿನಿಗೆ ಲಾರಿ ಡಿಕ್ಕಿ ಸ್ಥಳದಲೇ ಸಾವು, ಮತ್ತೊರ್ವ ಯುವತಿ ಆಸ್ಪತ್ರೆಗೆ ದಾಖಲು

» ಚಿತ್ರದುರ್ಗ

ಬಸ್ಸಿಗಾಗಿ ಕಾದು ಕುಳಿತಿದ್ದ ವಿದ್ಯಾರ್ಥಿನಿಗೆ ಲಾರಿ ಡಿಕ್ಕಿಯಾಗಿ ಮೃತಪಟ್ಟಿರುವ ಘಟನೆ ಭರಮಸಾಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ. ಘಟನೆಯಲ್ಲಿ ಒಬ್ಬ ವಿದ್ಯಾರ್ಥಿ ಗಾಯಗೊಂಡಿದ್ದಾನೆ.

ರಾಷ್ಟ್ರೀಯ ಹೆದ್ದಾರಿ 4ರಲ್ಲಿ ವಿಜಾಪುರ ಗ್ರಾಮದ ಬಳಿ ಘಟನೆ ನಡೆದಿದ್ದು, ಹಿರೇಕಂದವಾಡಿ ಗ್ರಾಮದ ಪಿಯುಸಿ ವಿದ್ಯಾರ್ಥಿನಿ ಸುಚಿತ್ರಾ(18) ಮೃತಪಟ್ಟಿದ್ದಾರೆ.ಲಾರಿ ಅಪಘಾತದಿಂದ ಗಾಯಗೊಂಡಿದ್ದ ವಿದ್ಯಾರ್ಥಿ ಆದಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ವಿಜಾಪುರದಿಂದ ಚಿತ್ರದುರ್ಗಕ್ಕೆ ಕಾಲೇಜಿಗೆ ಬರಲು ಹೆದ್ದಾರಿಯಲ್ಲಿ ಬಸ್ಸಿಗಾಗಿ ವಿದ್ಯಾರ್ಥಿಗಳು ಕಾಯುತ್ತಿದ್ದಾಗ ಲಾರಿ ಡಿಕ್ಕಿಯಾಗಿದೆ.ಅಪಘಾತದಿಂದ ಆಕ್ರೋಶಗೊಂಡಿರುವ ಸಾರ್ವಜನಿಕರು ವಿಜಾಪುರ ಬಳಿ ಹೆದ್ದಾರಿ ತಡೆದು ಪ್ರತಿಭಟನೆ ನಡೆಸುತ್ತಿದ್ದಾರೆ.

ಸರ್ವೀಸ್ ರಸ್ತೆ ಮೂಲಕ ಬಸ್ಸುಗಳು ಬಾರದ ಕಾರಣ ವಿದ್ಯಾರ್ಥಿಗಳು ಸೇರಿದಂತೆ ಎಲ್ಲ ಪ್ರಯಾಣಿಕರು ಹೆದ್ದಾರಿಯಲ್ಲಿ ಬಂದು ಬಸ್ಸು ಹತ್ತಬೇಕಾದ ಪರಿಸ್ಥಿತಿ ಇರುವುದರಿಂದ ಈ ಅಪಘಾತ ನಡೆದಿದೆ. ವಿದ್ಯಾರ್ಥಿನಿ ಬಲಿಯಾಗಿದ್ದಾಳೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸ್ಥಳಕ್ಕೆ ಭರಮಸಾಗರ ಠಾಣೆಯ ಪೊಲೀಸರು ಆಗಮಿಸಿದ್ದು, ಸಾರ್ವಜನಿಕರನ್ನು ಸಮಾಧಾನಿಸುವ ಪ್ರಯತ್ನ ಮಾಡುತ್ತಿದ್ದಾರೆ. ಆದರೆ, ಜನ ವಾಗ್ವಾದಕ್ಕೆ ಮುಂದಾಗಿದ್ದಾರೆ.

## ಪ್ರಮುಖ ಸುದ್ದಿ

# ಗ್ರಾಮೀಣ ವಿದ್ಯಾರ್ಥಿಗಳಿಗೆ ಬಸ್ ಸೌಲಭ್ಯಕ್ಕೆ ಆಗ್ರಹ

» ಚಿತ್ರದುರ್ಗ

ಜಿಲ್ಲೆಯಲ್ಲಿ ಬರುವ ಗ್ರಾಮಗಳಿಗೆ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೆಚ್ಚುವರಿ ಬಸ್ ಬಿಡುವ ಬಗ್ಗೆ ಹಾಗೂ ಪ್ರಸ್ತುತ ಮಾರ್ಗದ ಸಂಚಾರದಲ್ಲಿರುವ ಬಸ್ ಸರಿಯಾದ ಸಮಯಕ್ಕೆ ಸಂಚರಿಸುವಂತೆ ಸೂಕ್ತ ಕ್ರಮ ವಹಿಸಿ ಹಾಗೂ ಅಪಘಾತದಲ್ಲಿ ಮೃತಪಟ್ಟ ವಿದ್ಯಾರ್ಥಿನಿ ಸುಚಿತ್ರ ಇವರಿಗೆ ಪರಿಹಾರ ವ್ಯವಸ್ಥೆ ಕಲ್ಪಿಸಿಕೊಡುವಂತೆ ಎ.ಬಿ.ವಿ.ಪಿ ಆಗ್ರಹಿಸಿ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದಲ್ಲಿ ಪ್ರತಿಭಟನೆಯನ್ನು ನಡೆಸಿತು.

ಚಿತ್ರದುರ್ಗ ಜಿಲ್ಲೆಯಲ್ಲಿ ಬರುವ ಎಲ್ಲಾ ಗ್ರಾಮಗಳಲ್ಲಿ ಸರಿಯಾದ ಸಮಯಕ್ಕೆ ಬಸ್ ವ್ಯವಸ್ಥೆ ಇರುವುದಿಲ್ಲ. ಆದ ಕಾರಣ ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಶಾಲಾ ಕಾಲೇಜುಗಳಿಗೆ ಹೋಗಲು ತುಂಬಾ ತೊಂದರೆಯಾಗುತ್ತಿದ್ದು, ಇದರ ಜೊತೆಗೆ ಎಲ್ಲಾ ಬಸ್‌ಗಳು ರಾಷ್ಟ್ರೀಯ ಹೆದ್ದಾರಿಯ ಮಾರ್ಗದಲ್ಲಿ ಬರುತ್ತಿದ್ದು, ಇದನ್ನು ತಡೆದು ಹಳ್ಳಿಗಳ ಸರ್ವೀಸ್ ರಸ್ತೆಯ ಮಾರ್ಗದ ನಿಲ್ದಾಣಗಳಲ್ಲಿ ಬಸ್ ನಿಲ್ಲುವಂತೆ ಸೂಚಿಸಲು ಸಂಬಂಧಪಟ್ಟ ಚಾಲಕರಿಗೆ ಮತ್ತು ಕಂಡಕ್ಟರ್‌ಗಳಿಗೆ ಸೂಚಿಸಬೇಕು ಹಾಗೂ ಸರಿಯಾದ ಸಮಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸುವಂತೆ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಎ.ಬಿ.ವಿ.ಪಿ ಆಗ್ರಹಿಸಿತು. ವಿಜಾಪುರ ಗೊಲ್ಲರಹಟ್ಟಿಯಲ್ಲಿ ಬೆಳಿಗ್ಗೆ 9.00ಗಂಟೆಗೆ ಸಿರಿಗೆರೆ ಸರ್ಕಾರಿ ಬಸ್ ನಿಲ್ಲಿಸದ ಕಾರಣ ವಿದ್ಯಾರ್ಥಿಗಳು ರಾಷ್ಟ್ರೀಯ ಹೆದ್ದಾರಿಯಲ್ಲಿ ನಿಂತು ಮತ್ತೊಂದು ಬಸ್‌ಗೆ ಕಾಯುತ್ತಿದ್ದಾಗ ಹಿಂಬದಿಯಲ್ಲೆ ಲಾರಿ ಬಂದು ವಿದ್ಯಾರ್ಥಿನಿಗೆ ಅಪಘಾತ ಮಾಡಿದ್ದು, ಆ ವಿದ್ಯಾರ್ಥಿನಿಯು ಸ್ಥಳದಲ್ಲಿಯೇ ಮೃತಪಟ್ಟಿದ್ದಾಳೆ. ತಾವುಗಳು ಈ ವಿದ್ಯಾರ್ಥಿನಿಯ ಕುಟುಂಬಕ್ಕೆ ಪರಿಹಾರ ವ್ಯವಸ್ಥೆ ಕಲ್ಪಿಸಬೇಕು. ವಿಜಾಪುರ ಗೊಲ್ಲರಹಟ್ಟಿ ದಾವಣಗೆರೆ (ಸ್ನೇಹಮಹಿ) ಸೆಟ್ಲು ಬಸ್‌ಗಳು ಈ ಗ್ರಾಮಕ್ಕೆ ನಿಲ್ಲಸಬೇಕೆಂದು ಸೂಚಿಸಬೇಕು. ಹಿರೇಕಬ್ಬಿಗೆರೆ ಗೊಲ್ಲರಹಟ್ಟಿ, ಕಬ್ಬಿಗೆರೆ, ಅಡವಿಗೊಲ್ಲರಹಳ್ಳಿ ಈ ಗ್ರಾಮಗಳಿಗೆ ಬೆಳಗ್ಗೆ 8.00ಕ್ಕೆ ಸಮಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸಬೇಕುಜಾಲಿಕಟ್ಟೆ, ಈರಜ್ಜನ ಹಟ್ಟಿ, ಸೊಲ್ಲಾಪುರ, ಈ ಗ್ರಾಮಗಳಿಗೆ ಬಸ್‌ಗಳ ವ್ಯವಸ್ಥೆ ಇರುವುದಿಲ್ಲ. ತುರ್ತಾಗಿ ಬಸ್‌ಗಳ ವ್ಯವಸ್ಥೆ ಕಲ್ಪಿಸುವುದು. ಹಿರಿಯೂರು, ಹುಳಿಯೂರು ಮಾರ್ಗದ ಗ್ರಾಮಗಳಿಗೆ ಬೆಳಗ್ಗೆ 8.00ಕ್ಕೆ ಸಮಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸಬೇಕು.ಸಿರಿಗೆರೆ ಮಾರ್ಗದ ಬರುವ ಗ್ರಾಮಗಳಿಗೆ ಬೆಳಗ್ಗೆ 8.00ಕ್ಕೆ ಸಮಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಒತ್ತಾಯಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕ ಸಿದ್ದೇಶ್‌ಯಾದವ್, ಕನಕರಾಜ್, ಸುದರ್ಶನ್, ಮಹಿಳಾ ಪ್ರಮುಖ್ ಚೈತ್ರ, ಚಂದನ, ಸಾಮಾಜಿಕ ಜಾಲತಾಣ ಚಿತ್ರಸ್ವಾಮಿ, ಕಾರ್ಯಕರ್ತರಾದ ಗೌರಿಶಂಕರ, ಸುದೀಪ್, ಮಧು, ಕಾಟಲಿಂಗ, ಮನೋಜ್, ಮನೋಜ್.ಕೆ ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.





## ಫಾಸ್ಟ್ ನ್ಯೂಸ್

### ಪದಾಧಿಕಾರಿಗಳ ನೇಮಕ

» ಚಿತ್ರದುರ್ಗ

ಅಹಿಂದ ಕರ್ನಾಟಕ ಅಲ್ಪಸಂಖ್ಯಾತರ ಹಿಂದುಳಿದವರ ದಲಿತರ ಒಕ್ಕೂಟ (ರಿ) ಚಿತ್ರದುರ್ಗ ಜಿಲ್ಲೆಗೆ ನೂತವಾಗಿ ಪದಾಧಿಕಾರಿಗಳ ನೇಮಕ ಮಾಡಲಾಗಿದೆ. ಬೆಂಗಳೂರು ನಗರದ ಭೂ ಪ್ಲಾಜಾ ಹೋಟೆಲ್‌ನಲ್ಲಿ ನಡೆದ ಅಹಿಂದ ಶೋಷಿತ ಸಂಘಟನೆ ಜಾಗ್ರತೆ ಸಮಾವೇಶ ಕರ್ನಾಟಕ ರಾಜ್ಯ ಸಂಘಟನೆ ಪೂರ್ವಭಾವಿ ಸಭೆಯನ್ನು ಮಾಡಲಾಯಿತು ಅಹಿಂದ ರಾಜ್ಯ ಅಧ್ಯಕ್ಷರಾದ ಪ್ರಭುಲಿಂಗ ದೊಡ್ಡಿಣಿ, ಕಾರ್ಯದರ್ಶಿ ಶಿವಣ್ಣ.ಬಿ, ಭೀರಲಿಂಗ ಪೂಜಾರಿ ಹಾಗೂ ಕಾರ್ಯಧ್ಯಕ್ಷರಾದ ಕರಡಿಕುಪ್ಪ ಹಾಗೂ ಪದಾಧಿಕಾರಿಗಳು ಸಮ್ಮುಖದಲ್ಲಿ ಈ ಕೆಳಕಂಡವರನ್ನು ಆಯ್ಕೆ ಮಾಡಲಾಯಿತು. ಚಿತ್ರದುರ್ಗ ಜಿಲ್ಲಾಧ್ಯಕ್ಷರಾಗಿ ಕುರಿನಾಗರಾಜ್, ಜಿಲ್ಲಾ ಉಪಾಧ್ಯಕ್ಷರಾಗಿ ಕಾಂತರಾಜು.ಎಸ್, ಮಹಿಳಾ ಜಿಲ್ಲಾಧ್ಯಕ್ಷೆಯಾಗಿ ಪವಿತ್ರ.ಪಿ.ಕೆ, ಚಳ್ಳಕೆರೆ ತಾಲ್ಲೂಕು ಅಧ್ಯಕ್ಷರಾಗಿ ದೇವಪ್ಪ, ಮೊಳಕಾಲ್ಮೂರು ತಾಲ್ಲೂಕು ಅಧ್ಯಕ್ಷರಾಗಿ ಶಿವಶಂಕರ್ ನೇಮಕವಾಗಿದ್ದಾರೆ.

### ಪ್ರೌಢಶಾಲೆ ವಿದ್ಯಾರ್ಥಿಗಳಿಗೆ ಆಯೋಜನೆ ಜಿಲ್ಲಾ ಹಂತದ ಪ್ರಾಚ್ಯ ಪ್ರಜ್ಞೆ ಸ್ಪರ್ಧೆ




» ಚಿತ್ರದುರ್ಗ

ಚಿತ್ರದುರ್ಗ ನಗರದ ರಾಷ್ಟ್ರೀಯ ಹೆದ್ದಾರಿ-13ರ ಚಿನ್ಮೂಲಾದ್ರಿ ರಾಷ್ಟ್ರೀಯ ಪ್ರೌಢಶಾಲೆಯಲ್ಲಿ ಮಂಗಳವಾರ ಜಿಲ್ಲಾಮಟ್ಟದ ಪ್ರೌಢಶಾಲಾ ವಿದ್ಯಾರ್ಥಿಗಳ ಪ್ರಾಚ್ಯ ಪ್ರಜ್ಞೆ ಸ್ಪರ್ಧೆಗಳು ಜರುಗಿದವು. ಮೈಸೂರಿನ ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಚಿತ್ರದುರ್ಗ ತಾಲ್ಲೂಕು ಕ್ಷೇತ್ರ ಶಿಕ್ಷಣಾಧಿಕಾರಿ ನಾಗಭೂಷಣ್, ಡಿವೈಎಸ್‌ಪಿ ಸಿ.ಎಸ್.ವೆಂಕಟೇಶ್ ಉದ್ಘಾಟಿಸಿ, ವಿದ್ಯಾರ್ಥಿಗಳಿಗೆ ಪ್ರಾಚ್ಯ ಪ್ರಜ್ಞೆ ಪುರಾತತ್ವ ಸಂಗ್ರಹಣೆಗಳ ಬಗ್ಗೆ ಸಂಪೂರ್ಣ ಮಹಿತಿ ನೀಡಿದರು.ನಾಡಿನ ಪರಂಪರೆ, ಪ್ರಾಚ್ಯ ವಸ್ತುಗಳು ಹಾಗೂ ಸ್ಮಾರಕಗಳ ಬಗ್ಗೆ ಮಕ್ಕಳಲ್ಲಿ ಅರಿವು ಮೂಡಿಸಲು ಪ್ರಾಚ್ಯ ಪ್ರಜ್ಞೆ ಕಾರ್ಯಕ್ರಮ ರೂಪಿಸಲಾಗಿದ್ದು, ಚಿತ್ರಕಲೆ, ರಸಪ್ರಶ್ನೆ, ಪ್ರಬಂಧ, ಭಾಷಣ ಸ್ಪರ್ಧೆಗಳು ಸ್ಮಾರಕ, ಅವುಗಳ ಸಂರಕ್ಷಣೆ ಮಹತ್ವದ ಬಗ್ಗೆ ತಿಳುವಳಿಕೆ ನೀಡಲಾಗುವುದು ಕಾರ್ಯಕ್ರಮದಲ್ಲಿ ಕನ್ನಡ ವಿಷಯ ಪರಿವೀಕ್ಷಕ ಶಿವಣ್ಣ, ವೃತ್ತಿ ವಿಷಯ ಪರಿವೀಕ್ಷಕ ಬಸವರಾಜ್ ಓಲೇಕಾರ್, ಎನ್‌ಜಿಒ ಶ್ರೀನಿವಾಸ್, ಜಿಲ್ಲಾ ನೋಡಲ್ ಅಧಿಕಾರಿ ಚಂದ್ರಣ್ಣ, ತಾಲ್ಲೂಕು ನೋಡಲ್ ಅಧಿಕಾರಿ ವೇಣುಗೋಪಾಲ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

### ವಿದ್ಯಾರ್ಥಿ ವೇತನಕ್ಕೆ ಅರ್ಜಿ

» ಚಿತ್ರದುರ್ಗ

2023-24ನೇ ಸಾಲಿಗೆ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಅಹ್ವಾನಿಸಲಾಗಿದೆ. ಚಿತ್ರದುರ್ಗ ತಾಲ್ಲೂಕು ವ್ಯಾಪ್ತಿಯಲ್ಲಿ ವಿವಿಧ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಪಂಗಡದ ಮೆಟ್ರಿಕ್ ನಂತರದ ಬಾಲಕ, ಬಾಲಕಿಯರು ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ www.tw.kar.nic.in ವೆಬ್‌ಸೈಟ್‌ನ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಹ ವಿದ್ಯಾರ್ಥಿಗಳು www.tw.kar.nic.inಗೆ ಭೇಟಿ ನೀಡಿ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪಡೆಯಲು ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಸಂಪರ್ಕಿಸಬಹುದು ಎಂದು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

### ಪದಾಧಿಕಾರಿಗಳ ಆಯ್ಕೆ

» ಹಿರಿಯೂರು

ನಗರದ ಪ್ರವಾಸಿ ಮಂದಿರದಲ್ಲಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಡಾ.ಆರ್.ಕೋದಂಡರಾಮ್ ಅವರ ಆದೇಶದ ಮೇರೆಗೆ ತಾಲೂಕು ಸಮಿತಿಗೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಚಿತ್ರದುರ್ಗ ಜಿಲ್ಲಾ ಓಬಿಸಿ ವಲಸೆ ಕಾರ್ಮಿಕರ ಘಟಕ ಜಿಲ್ಲಾಧ್ಯಕ್ಷರಾಗಿ ಧೀಪಕ್ ಆಚಾರಿ, ಹಿರಿಯೂರು ತಾಲೂಕು ಉಪಾಧ್ಯಕ್ಷರಾಗಿ ಡಿ,ಗಿರೀಶ್, ತಾಲೂಕು ಸಂಘಟನಾ ಕಾರ್ಯದರ್ಶಿಯಾಗಿ ಎಚ್.ಎಸ್.ಮಹಾಲಿಂಗ, ತಾಲೂಕು ಯುವ ಘಟಕ ಪ್ರಧಾನ ಕಾರ್ಯದರ್ಶಿಯಾಗಿ ರಂಗಸ್ವಾಮಿ, ತಾಲೂಕು ಕಾರ್ಯದರ್ಶಿಗಳಾಗಿ ಮಸಿಯಣ್ಣ, ನರಸಿಂಹ, ಎಚ್.ಎಂ,ಮಹಾಲಿಂಗ, ತಾಲೂಕು ಕಾರ್ಯದರ್ಶಿಯಾಗಿ ವೆಂಕಟೇಶ್ ಇವರುಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಅಂಬೇಡ್ಕರ್ ಸ್ವಾಭಿಮಾನಿ ಸೇನೆಯ ರಾಜ್ಯ ಕಾರ್ಯದರ್ಶಿ ಕೆ.ರಾಮಚಂದ್ರಪ್ಪ, ತಾಲೂಕು ಅಧ್ಯಕ್ಷರಾದ ಆರ್.ರಾಘವೇಂದ್ರ, ಅಲ್ಪಸಂಖ್ಯಾಂತರ ಘಟಕದ ಮುಜಾಯಿದ್, ತಾಲೂಕು ಅಲ್ಪಸಂಖ್ಯಾತರ ಘಟಕ ಜಿಲ್ಲಾಧ್ಯಕ್ಷ ಖಾಲಿದ್, ಜಿಲ್ಲಾ ಉಪಾಧ್ಯಕ್ಷ ಮುಜಾಯಿದ್, ತಾಲೂಕು ಅಲ್ಪಸಂಖ್ಯಾತರ ಘಟಕ ಗೌರವಾಧ್ಯಕ್ಷ ಸನಾಉಲ್ಲಾ, ಐಮಂಗಲ ಹೋಬಳಿ ಅಧ್ಯಕ್ಷ ರಾಜಣ್ಣ, ತಾಲೂಕು ಯುವ ಘಟಕದ ಉಪಾಧ್ಯಕ್ಷ ಕೃಷ್ಣಪ್ಪ ಇತರರು ಉಪಸ್ಥಿತರಿದ್ದರು.

# ಸಮಾಜದ ಏಳಿಗೆಗಾಗಿ ಸಿದ್ಧರಾಮೇಶ್ವರರ ಶ್ರಮ

## ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಆಚರಣೆ ಸಮಾರಂಭದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

» ಚಿತ್ರದುರ್ಗ

12ನೇ ಶತಮಾನದ ದಿನಗಳಲ್ಲಿ ಅಲ್ಲಲ್ಲಿ ಕೆರೆ, ಕಟ್ಟೆ ಹಾಗೂ ಬಾವಿಗಳನ್ನು ನಿರ್ಮಿಸಿ, ಜಲ ಮೂಲಗಳ ಸಂರಕ್ಷಣೆಗೆ ಆದ್ಯತೆ ನೀಡಿ, ಜನ-ಜಾನುವಾರು, ಪಕ್ಷಿ ಸಂಕುಲಗಳೂ ಸೇರಿದಂತೆ ಸಕಲ ಜೀವರಾಶಿಗಳಿಗೂ ಲೇಸನ್ನು ಬಯಸಿ ಸಮಾಜದ ಏಳಿಗೆಗಾಗಿ ಶ್ರಮಿಸಿದವರು ಶಿವಯೋಗಿ ಶ್ರೀ ಸಿದ್ಧರಾಮೇಶ್ವರರು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ಆಚರಣೆ ಸಮಾರಂಭದಲ್ಲಿ ಸಿದ್ಧರಾಮೇಶ್ವರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಕರ್ಮಯೋಗಿ, ಕಾಯಕಯೋಗಿ, ಶಿವಯೋಗಿ ಸಿದ್ಧರಾಮೇಶ್ವರರು ಬೋಧನೆ, ವಚನಗಳನ್ನು ನೀಡುವುದು ಮಾತ್ರವಲ್ಲದೇ ಕಾಯಕದ ಮೂಲಕ ಸಮಾಜದ ಸೇವೆ ಮಾಡಿದ್ದಾರೆ ಎಂದು ತಿಳಿಸಿದ ಅವರು, ನಾವುಗಳು ನಮ್ಮಲ್ಲಿನ ಮಹಾನ್ ದಾರ್ಶನಿಕರ, ಚಿಂತಕರ ವಿಚಾರಧಾರೆಗಳನ್ನು ತಿಳಿದುಕೊಳ್ಳುತ್ತಿಲ್ಲ. ದಾರ್ಶನಿಕರ ವಿಚಾರಧಾರೆಗಳ ಕುರಿತು ತಿಳಿದುಕೊಂಡಾಗ ಉತ್ತಮ ನಾಗರಿಕರಾಗಲು ಸಾಧ್ಯ ಎಂದು ತಿಳಿಸಿದರು.




ಭೋವಿ ಸಮಾಜ ಕಾಯಕದಲ್ಲಿ ತುಂಬಾ ಶ್ರಮಜೀವಿಗಳಾಗಿದ್ದು, ಕಾಯಕನಿಷ್ಠ ಸಮಾಜವಾಗಿದೆ. ಈ ಸಮಾಜಕ್ಕೆ ಸಾಕಷ್ಟು ಮೀಸಲಾತಿ ಸೌಲಭ್ಯಗಳಿದ್ದು, ಶೈಕ್ಷಣಿಕ, ರಾಜಕೀಯ ಸೇರಿದಂತೆ ಸರ್ಕಾರದ ಸೌಲಭ್ಯಗಳ ಅವಕಾಶ ಉಪಯೋಗಿಸಿಕೊಳ್ಳಬೇಕು. ಸಮಾಜದಲ್ಲಿ ಕೆಲವರು ಅಲೆಮಾರಿ ಜೀವನ ಸಾಗಿಸುತ್ತಿದ್ದು, ತಾವುಗಳು ಕೆಲಸಕ್ಕೆ ಹೋಗಬೇಕಾದರೆ ಯಾವುದೇ ಕಾರಣಕ್ಕೂ ಮಕ್ಕಳನ್ನು ಕರೆದುಕೊಂಡು ಹೋಗಬಾರದು ಎಂದು ಮನವಿ ಮಾಡಿದ ಅವರು, ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವಂತೆ ಸಲಹೆ ನೀಡಿದರು.

ಆದರ್ಶ ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ಮಹನೀಯರು ಹಾಕಿಕೊಟ್ಟ ದಾರಿದೀವಿಗೆಯಲ್ಲಿ ನಾವೆಲ್ಲರೂ ನಡೆಯಬೇಕಿದೆ. ಶಿವಯೋಗಿ ಸಿದ್ಧರಾಮೇಶ್ವರರ ವಿಚಾರಧಾರೆಗಳನ್ನು ನಾವುಗಳು ರೂಢಿಸಿಕೊಳ್ಳಬೇಕು ಎಂದು ತಿಳಿಸಿದರು.

ಹಿರಿಯೂರು ವಾಣಿ ಸಕ್ಕರೆ ಪ್ರಥಮ ದರ್ಜೆ ಕಾಲೇಜು ಸಹಾಯಕ ಪ್ರಾಧ್ಯಾಪಕರು ಹಾಗೂ ಸಾಹಿತಿ ಪ್ರೊ.ಬಸವರಾಜ ಟಿ.ಬೆಳಗಟ್ಟ ಉಪನ್ಯಾಸ ನೀಡಿ, 12ನೇ ಶತಮಾನದಲ್ಲಿ ಬಸವಣ್ಣ, ಚೆನ್ನಬಸವಣ್ಣ, ಅಲ್ಲಮಪ್ರಭು, ಜೇಡರದಾಸಿಮಯ್ಯ, ಅಕ್ಕಮಹಾದೇವಿ ಸೇರಿದಂತೆ ಇಂತಹ ಅಗ್ರಗಣ್ಯ ಪ್ರಥಮ ಸ್ಥಾನದಲ್ಲಿದ್ದವರು ಶಿವಯೋಗಿ ಶ್ರೀ ಸಿದ್ಧರಾಮರು ಎಂದು ಹೇಳಿದರು. ಸಿದ್ಧರಾಮರು ವಚನ, ಸ್ವರವಚನ, ಬಸವಸ್ತೋತ್ರ, ತ್ರಿವಧಿ, ಅಷ್ಟಾವರಣ ಸ್ತೋತ್ರದ ತ್ರಿವಧಿ, ಸಂಕೀರ್ಣ ತ್ರಿವಧಿ ಸೇರಿದಂತೆ ವೈವಿಧ್ಯಮಯ ಸಾಹಿತ್ಯ ಸೃಷ್ಠಿಮಾಡಿದ್ದಾರೆ. ವಚನ ಮತ್ತು ಸ್ವರವಚನಗಳಲ್ಲಿ ಸಿದ್ಧರಾಮೇಶ್ವರ ಅಂಕಿತನಾಮ ಕಪಿಲಸಿದ್ದ ಮಲ್ಲಿಕಾರ್ಜುನ ಅಂತಾ ಇದ್ದರೆ ತ್ರಿವಧಿಗಳಲ್ಲಿ ಯೋಗಿನಾಥ ಎಂಬ ಅಂಕಿತನಾಮ ಇದೆ. 12ನೇ ಶತಮಾನದಲ್ಲಿ ಎರಡು ಅಂಕಿತನಾಮವಿರುವ ಏಕೈಕ ವ್ಯಕ್ತಿ ಶಿವಯೋಗಿ ಸಿದ್ಧರಾಮರು. ಇವರ ವಚನಗಳಲ್ಲಿ ವೈಯಕ್ತಿಕ ಬದುಕಿನ ಸಂಗತಿಗಳು, ಧರ್ಮ ತತ್ವ ಜಿಜ್ಞಾಸೆ, ಸಾಮಾಜಿಕ ಕಳಕಳಿ ವಿಷಯಗಳ ವಚನಗಳು ಪ್ರಧಾನವಾಗಿ ಕಂಡುಬಂದಿವೆ ಎಂದು ಹೇಳಿದರು. ಜಿಲ್ಲಾ ಭೋವಿ ಸಮಾಜದ ಅಧ್ಯಕ್ಷ ಟಿ.ತಿಪ್ಪೇಸ್ವಾಮಿ ಮಾತನಾಡಿ, ಕಾಯಕದಿಂದ ಕೈಲಾಸ ಕಂಡ ಪುಣ್ಯಾತ್ಮರು ಸಿದ್ಧರಾಮರು. ಶಿವಯೋಗಿ ಸಿದ್ಧರಾಮರು ಕಾಯಕದ ಜೊತೆಗೆ ಹಲವಾರು ವಚನಗಳನ್ನು ರಚನೆ ಮಾಡಿದ್ದಾರೆ. ಕೆರೆ-ಕಟ್ಟೆ, ಬಾವಿ ನಿರ್ಮಾಣ, ರಸ್ತೆ ನಿರ್ಮಾಣ ಸೇರಿದಂತೆ ಕಷ್ಟದ ಕಾಯಕವನ್ನು ಇಂದಿಗೂ ಸಮಾಜ ಮುಂದುವರೆಸಿಕೊಂಡು ಬರುತ್ತಿದೆ ಎಂದರು.ಜಯಂತಿ ಅಂಗವಾಗಿ ಮೊಳಕಾಲ್ಮುರು ತಾಲ್ಲೂಕು ಸಿದ್ದಯ್ಯನಕೋಟೆಯ ನುಂಕೇಶ್ ಮತ್ತು ತಂಡದವರು ವಚನ ಗಾಯನ ಪ್ರಸ್ತುತ ಪಡಿಸಿದರು.ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಬ್ದುಲ್ ಖಾದರ್, ತಹಶೀಲ್ದಾರ್ ನಾಗವೇಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ, ಜಿಲ್ಲಾ ಭೋವಿ ಸಮಾಜದ ಕಾರ್ಯದರ್ಶಿ ಹೆಚ್.ಲಕ್ಷ್ಮಣ್,ಸಮಾಜದಮುಖಂಡರಾದ ಡಿ.ಸಿ.ಮೋಹನ್, ಲಕ್ಷ್ಮಣಪ್ಪ, ಸತೀಶ್, ಭರತ್, ಶ್ರೀನಿವಾಸ್ ಮಳಲಿ, ಆನಂದ್, ರವಿಕುಮಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

# ರಾಷ್ಟ್ರಮಂದಿರದ ಭವ್ಯ ಸ್ವಾಗತಕ್ಕಾಗಿ ಸ್ವಚ್ಛತೀರ್ಥ





» ಚಿತ್ರದುರ್ಗ

ಅಯೋಧ್ಯೆಯಲ್ಲಿ ಐತಿಹಾಸಿಕ ಶ್ರೀ ರಾಮಲಲಾನ ಪ್ರಾಣಪ್ರತಿಷ್ಠೆ ನಡೆಯಲಿರುವ ಹಿನ್ನೆಲೆಯಲ್ಲಿ ದೇಶದಾದ್ಯಂತ ಇರುವ ಎಲ್ಲಾ ದೇಗುಲ ಮತ್ತು ತೀರ್ಥಕ್ಷೇತ್ರಗಳಲ್ಲಿ ಸ್ವಚ್ಛತಾ ಕಾರ್ಯ ನಡೆಸಲು ಪ್ರಧಾನಿಗಳಾದ ನರೆಂದ್ರ ಮೋದಿ ಜೀ ರವರ ಕರೆ ಮೇರೆಗೆ ಇಂದು ಚಿತ್ರದುರ್ಗ ನಗರದ ಆನೆ ಬಾಗಿಲಿನ ಹತ್ತಿರದ ಗಣೇಶ ದೇವಸ್ಥಾನದ ಆವರಣವನ್ನು ಸ್ವಚ್ಛಗೊಳಿಸಲಾಯಿತು.

ಜನವರಿ 21 ರ ವರೆಗೆ ಎಲ್ಲೆಡೆ ದೇವಾಲಯಗಳನ್ನು ಸ್ವಚ್ಛಗೊಳಿಸಿ 22 ರಂದು ಪ್ರತಿ ಮನೆಗಳಲ್ಲಿ ರಾಮಜ್ಯೋತಿ ಬೆಳಗುವ ಮೂಲಕ ಶ್ರೀರಾಮನನ್ನು ಸ್ವಾಗತಿಸುವಂತೆ ಕರೆ ನೀಡಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ಜಿಲ್ಲಾ ಮಾಜಿ ಪ್ರಧಾನ ಕಾರ್ಯದರ್ಶಿಯಾದ ಮಲ್ಲಿಕಾರ್ಜುನ್,ಜಿಲ್ಲಾ ವಕ್ತಾರರಾದ ನಾಗರಾಜ್ ಬೇದ್ರೆ , ಸಂಘ ಪರಿವಾರದ ಮಲ್ಲೂರು ರಾಯಗೌಡ ವಿಶೇಷ ಆಹ್ವಾನಿತ ರಾದ ನಂದಿ ನಾಗರಾಜ್ ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾದ ಯಶವಂತ್ ,ನಗರ ಪ್ರಧಾನ ಕಾರ್ಯದರ್ಶಿಯಾದ ಕಿರಣ್ ,ವಸಂತ್ ಆಚಾರ್ ಪಕ್ಷದ ಕಾರ್ಯಕರ್ತರು ಹಾಗೂ ಸ್ಥಳೀಯ ಮುಖಂಡರು ಭಾಗವಹಿಸಿದ್ದರು.




**ಬಿಜೆಪಿ. ಜಿಲ್ಲಾಧ್ಯಕ್ಷರಾಗಿ ಎರಡನೆ ಬಾರಿಗೆ ಮರು ಆಯ್ಕೆಯಾಗಿರುವ ಎ.ಮುರಳಿ ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪನವರ ನಿವಾಸಕ್ಕೆ ಭೇಟಿ ನೀಡಿದರು.**

# ಅಜ್ಜಯ್ಯ ಸ್ವಾಮಿ ದೇವಾಲಯದ ಪ್ರಾರಂಭೋತ್ಸವ, ಪಂಚಲೋಹದ ವಿಗ್ರಹ ಪ್ರತಿಷ್ಠಾಪನಾ ಕಾರ್ಯಕ್ರಮ

» ಹಿರಿಯೂರು

ತಾಲೂಕಿನ ಕ್ಯಾತೆ ದೇವರಹಟ್ಟಿಯಲ್ಲಿ ಶ್ರೀ ಉಕ್ಕಡಗಾತ್ರಿ ಶ್ರೀ ಅಜ್ಜಯ್ಯ



ಸ್ವಾಮಿ ದೇವಾಲಯ ಪ್ರಾರಂಭೋತ್ಸವ ಮತ್ತು ಅಜ್ಜಯ್ಯ ಸ್ವಾಮಿ, ಪಂಚಲೋಹ ವಿಗ್ರಹ ಪ್ರತಿಷ್ಠಾಪನಾ ಕಾರ್ಯಕ್ರಮವು ಇದೇ ಜನವರಿ 25 ಮತ್ತು 26ರ ಎರಡು ದಿನಗಳ ಕಾಲ ನಡೆಯಲಿದೆ ಇದರ ಅಂಗವಾಗಿ 25ರ ಗುರುವಾರ ಬೆಳಿಗ್ಗೆ ಧ್ವಜಾರೋಹಣದೊಂದಿಗೆ ಕಾರ್ಯಕ್ರಮಗಳು ಆರಂಭವಾಗಲಿದ್ದು ಗಣಪತಿ ಪೂಜೆ ಪುಣ್ಯಾಹ ದೇವಾಲಯ ಶುದ್ಧಿ ವಿಗ್ರಹಕ್ಕೆ ಜಲಾಧಿವಾಸ ಕ್ಷೀರಾಧಿವಾಸ ಧಾನ್ಯದಿವಾಸ ಪುಷ್ಪಾಧಿವಾಸ ಹಾಗೂ ರಾತ್ರಿ 10 ಗಂಟೆಗೆ ಶಯ್ಯಾಧಿವಾಸ ನಂತರ ಮಹಾಮಂಗಳಾರತಿ ಕ್ಯಾತೆ ದೇವರು ಮತ್ತು ಕಾಟಲಿಂಗೇಶ್ವರ ದೇವರುಗಳ ಆಗಮನ ನಡೆಯಲಿದೆ 26ರ ಶುಕ್ರವಾರ ಬೆಳಿಗ್ಗೆ 4 ಗಂಟೆಗೆ ಅಗ್ನಿ ಸ್ಥಾಪನೆ ಗಣಪತಿ ಹೋಮ ನವಗ್ರಹ ಮೃತ್ಯುಂಜಯ ಪ್ರಧಾನ ದೇವತಾ ಹೋಮ ನಡೆಯಲಿದೆ. ಪೂರ್ಣಾಹುತಿ ಕುಂಭಾಭಿಷೇಕ. ಪಂಚಾಮೃತ ಅಭಿಷೇಕ ಅಲಂಕಾರ ಪೂಜಾ ಕಾರ್ಯಕ್ರಮಗಳು ನಡೆಯಲಿವೆ ಮಹಾಮಂಗಳಾರತಿ ನಂತರ ತೀರ್ಥ ಪ್ರಸಾದ ವಿನಿಯೋಗ ಹಾಗೂ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಭಕ್ತಾದಿಗಳು ಈ ಎಲ್ಲಾ ಪೂಜಾ ಕಾರ್ಯಕ್ರಮಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ವ್ಯವಸ್ಥಾಪಕರು ಮನವಿ ಮಾಡಿದ್ದಾರೆ

## ಪ್ರಮುಖ ಸುದ್ದಿ

# ರಾಜ್ಯ ಸರ್ಕಾರದಿಂದ ಕುಲ ಕಸುಬುಗಳ ನಿರ್ಲಕ್ಷ್ಯ: ಸ್ವಾಮೀಜಿ

» ಚಿತ್ರದುರ್ಗ

ರಾಜ್ಯ ಸರ್ಕಾರ ಮಲ್ಟಿ ನ್ಯಾಷನಲ್ ಕಂಪನಿಗಳಿಗೆ ಹೆಚ್ಚಿನ ಪ್ರೋತ್ಸಾಹವನ್ನು ನೀಡುವುದರ ಮೂಲಕ ಕುಲ ಕಸುಬುಗಳನ್ನು ನಿರ್ಲಕ್ಷ ಮಾಡುತ್ತಿದೆ, ಇದರಿಂದ ಒಂದು ಜನಾಂಗವೇ ನಾಶವಾಗುವ ಹಂತವನ್ನು ತಲುಪಿದೆ ಈ ಹಿನ್ನಲೆಯಲ್ಲಿ ಕುಲ ಕಸುಬುಗಳಿಗೆ ಹೆಚ್ಚಿನ ರೀತಿಯ ಒತ್ತನ್ನು ನೀಡಬೇಕು ಅದೇ ರೀತಿ ಕಾಂತರಾಜ್ ವರದಿಯನ್ನು ಸರ್ಕಾರ ಸ್ವೀಕಾರ ಮಾಡಿ ಅದನ್ನು ಅಂಗೀಕಾರ ಮಾಡುವಂತೆ ಸರ್ಕಾರವನ್ನು ಅತಿ ಹಿಂದುಳಿದ ಮಠಾಧೀಶರ ಮಹಾಸಭಾದ ರಾಜ್ಯಾಧ್ಯಕ್ಷರಾದ ಡಾ.ಪ್ರಣವಾನಂದ ಶ್ರೀಗಳು ಆಗ್ರಹಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದ ಕೇತೇಶ್ವರ ಮಠದಲ್ಲಿ ನಿನ್ನೆ ಸಭೆಯನ್ನು ನಡೆಸಿದ ಅತಿ ಹಿಂದುಳಿದ ಮಠಾಧೀಶರು ನಮ್ಮ ಸಮುದಾಯಕ್ಕೆ ಸರ್ಕಾರ ಹೆಚ್ಚಿನ ಒತ್ತನ್ನು ನೀಡಬೇಕಿದೆ ಬರೀ ಮೇಲ್ವರ್ಗಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡುತ್ತಿದೆ ಇದರಿಂದ ಹಿಂದುಳಿದ ನಮ್ಮಂತಹ ಸಮುದಾಯದವರು ನಿರ್ಲಕ್ಷಕ್ಕೆ ಒಳಗಾಗುತ್ತಿದ್ದಾರೆ. ಸರ್ಕಾರ ಮಲ್ಟಿ ನ್ಯಾಷನಲ್ ಕಂಪನಿಗಳಿಗೆ ಹೆಚ್ಚಿನ ಒತ್ತನ್ನು ನೀಡುತ್ತಿರುವುದರಿಂದ ಕುಲ ಕಸುಬುಗಳಾದ ಕುಂಬಾರಿಕೆ, ಕಮ್ಮಾರಿಕೆ, ಚಮ್ಮಾರಿಕೆ,




ಅಕ್ಕಸಾಲಿಗ, ಸೇಂದಿ ಇಳಿಸುವುದು ಸೇರಿದಂತೆ ಇತರೆ ಕುಲ ಕಸುಬುಗಳು ಕಣ್ಮರೆಯಾಗುತ್ತಿವೆ, ಇವುಗಳನ್ನು ಉಳಿಸಿಕೊಳ್ಳಬೇಕಿದೆ ಇದಕ್ಕೆ ಸರ್ಕಾರದ ಸಹಾಯ ಅಗತ್ಯ ಇದೆ ಎಂದರು.

ಪ್ರತಿಯೊಂದು ಜಿಲ್ಲೆಯಲ್ಲಿ ಅವರದ್ದೇ ಆದ ಕುಲ ಕಸುಬುಗಳು ಇವೆ. ಅವುಗಳನ್ನು ಉಳಿಸಿಕೊಳ್ಳುವುದು ನಮ್ಮ ಹೊಣೆಗಾರಿಕೆಯಾಗಿದೆ. ಸರ್ಕಾರವೂ ಸಹಾ ಪ್ರಭಾವಿ ಮಠಗಳಿಗೆ ಮಾತ್ರ ಹೆಚ್ಚಿನ ಅನುದಾನವನ್ನು ನೀಡುತ್ತಿದೆ, ನಮ್ಮಂತಹ ಮಠಗಳಿಗೆ ಅನುದಾನವನ್ನು ನೀಡುತ್ತಿಲ್ಲ ಅಲ್ಲದೆ ನಮ್ಮನ್ನು ಕಣ್ಣೆತ್ತಿ ಸಹಾ ನೋಡುತ್ತಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ ಡಾ.ಪ್ರಣವಾನಂದ ಶ್ರೀಗಳು, ಮುಂದಿನ ದಿನದಲ್ಲಿ ಲೋಕಸಭಾ ಚುನಾವಣೆ ಬರುತ್ತಿದ್ದು, ಈ ಸಮಯದಲ್ಲಿ ನಮ್ಮ ಸಮುದಾಯವರನ್ನು ಜಾಗೃತಿ ಮೂಡಿಸಲಾಗುತ್ತಿದೆ ಅಂಬೇಡ್ಕರ್ ನೀಡಿರುವ ಅಸ್ತ್ರ ಮತವನ್ನು ಮಾರಿ ಕೊಳ್ಳದೆ ಒಳ್ಳೇಯವರಿಗೆ ಮತವನ್ನು ದಾನ ಮಾಡಿ ಎಂದು ತಿಳಿಸುವ ಕಾರ್ಯವನ್ನು ಮುಂದಿನ ದಿನಮಾನದಲ್ಲಿ ಮಾಡಲಾಗುತ್ತದೆ ಎಂದು ತಿಳಿಸಿದರು.

ಸರ್ಕಾರ ವಿವಿಧ ರೀತಿಯ ನಿಗಮಗಳನ್ನು ಸ್ಥಾಪನೆ ಮಾಡುತ್ತಿದೆ ಆದರೆ ಅದಕ್ಕೆ ಅನುದಾನವನ್ನು ನೀಡುತ್ತಿಲ್ಲ, ಇದರಿಂದ ಯಾವ ಪ್ರಯೋಜನವಾಗುವುದಿಲ್ಲ, ಸರ್ಕಾರ ಅನುದಾನವನ್ನು ನೀಡುವುದರ ಮೂಲಕ ನಿಗಮದಿಂದ ಸಮುದಾಯಗಳಿಗೆ ಪ್ರಯೋಜನವನ್ನು ನೀಡಬೇಕಿದೆ. ಎಂದು ತಿಳಿಸಿ ರಾಜ್ಯದ ಮೂರು ಪಕ್ಷಗಳು ಸಹಾ ನಮ್ಮ ಅತಿ ಹಿಂದುಳಿದ ಸಮುದಾಯಗಳನ್ನು ನಿರ್ಲಕ್ಷ ಮಾಡಿವೆ. ನಮ್ಮನ್ನು ಚುನಾವಣೆ ಸಮಯದಲ್ಲಿ ಮಾತ್ರ ಉಪಯೋಗ ಮಾಡಿಕೊಂಡು ನಂತರ ಬೀಸಾಡುತ್ತಿದ್ದಾರೆ ಇದು ತಪ್ಪಬೇಕು ನಮಗೂ ಸಹಾ ಸರಿಯಾದ ರೀತಿಯಲ್ಲಿ ಪ್ರಾತಿನಿದ್ಯವನ್ನು ನೀಡಬೇಕೆಂದು ಮೂರು ಪಕ್ಷದ ಮುಖಂಡರನ್ನು ಆಗ್ರಹಿಸಿದರು.


ಅತಿ ಹಿಂದುಳಿದ ಮಠಾಧೀಶರ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾದ ಬಸವನಾಗ್ತಿದೇವ ಶ್ರೀಗಳು ಮಾತನಾಡಿ, ನಹಮ್ಮ ಸಮುದಾಯಗಳನ್ನು ಆಳುವ ಪಕ್ಷಗಳು ಕಡೆಗಣಿಸಿದ್ದಾರೆ, ಇದರ ಬಗ್ಗೆ ಜನ ಜಾಗೃತಿಯನ್ನು ಮೂಡಿಸುವ ಕಾರ್ಯವನ್ನು ಗ್ರಾಮಾಂತರ ಮಟ್ಟದಿಂದ ಮಾಡಲಾಗುವುದು. ಶಿಕ್ಷಣ ವಂಚಿತ ಸಮುದಾಯಗಳಿಗೆ ಶಿಕ್ಷಣವನ್ನು ಕೊಡಿಸುವ ಕಾರ್ಯವನ್ನು ಮಾಡಬೇಕಿದೆ. ನಮ್ಮನ್ನು ಕೂಲಿಗಳಂತೆ ನಡೆಸಿಕೊಳ್ಳುತ್ತಿದ್ದಾರೆ. ನಮ್ಮಲ್ಲಿನ ನೂನ್ಯತೆಯನ್ನು ಸರಿಪಡಿಸಿಕೊಳ್ಳುವುದರ ಮೂಲಕ ಮುಖ್ಯವಾಹಿನಿಗೆ ಬರುವ ಪ್ರಯತ್ನವನ್ನು ಮಾಡಲಾಗುವುದು ಎಂದರು.

ಸರ್ಕಾರ ಈ ಹಿಂದೆ ಕಾಂತರಾಜ್ ರವರಿಂದ ಅರ್ಥೀಕ ಸಮಾಜಿಕ ಶೈಕ್ಷಣಿಕ ವರದಿಯನ್ನು 175 ಕೋಟಿ ವೆಚ್ಚ ಮಾಡಿ ತಯಾರಿಸಿತ್ತು. ಅದರೆ ಅದು ಈವರೆವಿಗೂ ಸರ್ಕಾರಕ್ಕೆ ಬಂದಿಲ್ಲ ಈ ಕೂಡಲೇ ಮುಖ್ಯಮಂತ್ರಿಗಳು ಈ ವರಿದಯನ್ನು ಸ್ವೀಕಾರ ಮಾಡಿ ಅದನ್ನು ಅಂಗೀಕರಿಸಿ ಜಾರಿ ಮಾಡಬೇಕಿದೆ ಇದ್ದಲ್ಲದೆ ಸರ್ಕಾರಿ ನೌಕರಿಯಲ್ಲಿರುವ ನಮ್ಮ ಸಮುದಾಯದ ನೌಕರರ ಮೇಲೆ ವಿವಿಧ ರೀತಿಯ ಕಿರುಕುಳ ನಡೆಯುತ್ತಿದೆ ಇದರ ಬಗ್ಗೆಯೂ ಸಹಾ ಮುಖ್ಯಮಂತ್ರಿಗಳು ಇದರ ಬಗ್ಗೆ ಗಮನ ನೀಡುವುದರ ಮೂಲಕ ನಮ್ಮ ಸಮುದಾಯದವರ ಮೇಲೆ ನಡೆಯುವ ದೌರ್ಜನ್ಯವನ್ನು ತಪ್ಪಿಸುವಂತೆ ಮನವಿ ಮಾಡಿದರು.

ಗೋಷ್ಠಿಯಲ್ಲಿ ದೊಡೇಂದ್ರ ಶ್ರೀಗಳು, ಸರ್ದಾರ್ ಸೇವಾಲಾಲ್ ಶ್ರೀಗಳು, ಬಸವಮೂರ್ತಿ ಕುಂಬಾರ ಗುಂಡಯ್ಯ ಶ್ರೀಗಳು, ಕರುಣಾಕರ ಸ್ವಾಮಿಗಳು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಮೂರರಲ್ಲಿ 1 ಚಿರತೆ ಸೆರೆ ಇನ್ನೂ ಅತಂಕದಲ್ಲಿ ಗ್ರಾಮದ ಜನರು




» **ಹೊಸದುರ್ಗ**

ಕಳೆದ ನಾಲ್ಕು ದಿನಗಳಿಂದ ತಾಲೂಕಿನ ದೇವಿಗೆರೆ ಸಮೀಪವಿರುವ ಕೃಷ್ಣಾಪುರ ಗ್ರಾಮದ ಸಮೀಪ ಜಮೀನಿನಲ್ಲಿ ಒಟ್ಟಿಗೆ ಕಾಣಿಸಿಕೊಂಡ ಮೂರು ಚಿರತೆಗಳಲ್ಲಿ ಅರಣ್ಯ ಇಲಾಖೆಯವರು ಅಳವಡಿಸಿದ ಬೋನಿಗೆ ಮಂಗಳವಾರ ಸುಮಾರು 8 ರಿಂದ 9 ವರ್ಷದ ಒಂದು ಗಂಡು ಚಿರತೆ ಸೆರೆಯಾಗಿದೆ. ಭಾನುವಾರ ರಾತ್ರಿ ಚಿರತೆ ಗ್ರಾಮಕ್ಕೆ ಪ್ರವೇಶ ಮಾಡಿ ಹಸುವಿನ ಮೇಲೆ ದಾಳಿ ಮಾಡಿ ಹಸುವನ್ನು ಕೊಂದು ಹಾಕಿ ಹೋಗಿತ್ತು ಇದರಿಂದ ಗ್ರಾಮಸ್ಥರು ಕಂಗಲಾಗಿ ತಕ್ಷಣವೇ ಅರಣ್ಯ ಇಲಾಖೆಗೆ ದೂರು ನೀಡಿದ್ದಾರೆ.ಸೋಮವಾರ ಇಲಾಖೆಯವರು ಗ್ರಾಮದ ಸಮೀಪ ಬೋನ್ ಅಳವಡಿಸಿದ್ದಾರೆ ಮಂಗಳವಾರ ಬೆಳಿಗ್ಗೆ ಚಿರತೆಯೊಂದು ಬೋನಿಗೆ ಸೆರೆಯಾಗಿದ್ದು ಸೆರೆಯಾಗಿರುವ ಚಿರತೆಯನ್ನು ಬಂಡೀಪುರ ಅರಣ್ಯ ಪ್ರದೇಶಕ್ಕೆ ಬಿಡಲಾಗುವುದು ಎಂದು ಆರ್.ಎಫ್.ಓ ಸುನೀಲ್ ಮಾಹಿತಿ ನೀಡಿದ್ದು ಉಳಿದ ಎರಡು ಚಿರತೆಗಳಿಗೆ ಬಲೆ ಬೀಸಲಾಗಿದ್ದು ಇಲಾಖೆಯ ಸಿಬ್ಬಂಧಿಯವರನ್ನು ಗ್ರಾಮದ ಹಾಜು ಬಾಜಿನಲ್ಲಿ ಬೀಡು ಬಿಟ್ಟು ಕೃಷ್ಣಾಪುರ ಸೇರಿದಂತೆ ಸುತ್ತ ಮುತ್ತಲ ಗ್ರಾಮದ ಜನರಿಗೆ ಸೂಚನೆಗಳನ್ನು ನೀಡಲಾಗಿದೆ ಎಂದು ಅವರು ತಿಳಿಸಿದರು.

### ಮಾಜಿ ಪುರಸಭಾ ಸದಸ್ಯ ಪರಮೇಶ್ ನಿಧನ

» **ಹೊಸದುರ್ಗ**



ಪಟ್ಟಣದ ಮಾಜಿ ಪುರಸಭಾ ಸದಸ್ಯ ಜೋಟು ಪರಮೇಶ್ (35) ತೀವ್ರ ಹೃದಯಾಘಾತದಿಂದ ಮಂಗಳವಾರ ಮೃತ ಪಟ್ಟಿದ್ದಾರೆ. ಮೃತರಿಗೆ ತಂದೆ, ತಾಯಿ ಹೆಂಡತಿ, ಹಾಗೂ ಅಪಾರ ಸ್ನೇಹ ಬಳಗವಿದ್ದು ಮೃತರ ಅಂತ್ಯಕ್ರಿಯೆ ಪಟ್ಟಣದ ರುದ್ರಭೂಮಿಯಲ್ಲಿ ನೆರವೇರಿತು,ಅತಿ ಚಿಕ್ಕ ವಯಸ್ಸಿನಲ್ಲಿ ಪರಮೇಶ್ ಹೊಸದುರ್ಗ ಪುರಸಭಾ ಸದಸ್ಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದರು.

### ಭವ್ಯ ರೀತಿಯಲ್ಲಿ ಜರುಗಿದ ನಾಗತಿಹಳ್ಳಿ ಉತ್ಸವ



» **ಹೊಸದುರ್ಗ**

ತಾಲ್ಲೂಕಿನ ಮಾಡದಕೆರೆ ಹೋಬಳಿ ನಾಗತಿಹಳ್ಳಿ ಗ್ರಾಮದಲ್ಲಿ ಮಂಗಳವಾರ ಮುಂಜಾನೆ ನಾಗತಿಹಳ್ಳಿ ಗ್ರಾಮದ ಶ್ರೀ ಈಶ್ವರ,ನಂದಿಬಸವೇಶ್ವರ ಹಾಗೂ ಶ್ರೀ ಕೆರೆಯಾಗಳಮ್ಮ ದೇವರ ಆರುತಿ ಬಾನೋತ್ಸವವು ಸಡಗರ ಸಂಭ್ರಮಗಳಿಂದ ಜರುಗಿತು. ಮೀಸಲು ಅಕ್ಕಿಯಿಂದ ತಯಾರಿಸಿದ ತಂಬಿಟ್ಟಿನ ಆರತಿಗೆ ಪರಿಮಳ ಸೂಸುವ ಮಲ್ಲಿಗೆ ಹೂವಿನಿಂದ ಅಲಂಕರಿಸಿ ನೂರಾರು ಸುಮಂಗಲಿಯರು ದೇವರಿಗೆ ಹರಕೆ ಸಲ್ಲಿಸಿದರು. ಜಾತ್ರೆ ಅಂಗವಾಗಿ ಇಡೀ ರಾತ್ರಿ ಹೂವಿನ ಅಡ್ಡ ಪಲ್ಲಕ್ಕಿ ಉತ್ಸವ ಭವ್ಯರೀತಿಯಲ್ಲಿ ಜರುಗಿತು. ಉತ್ಸವದ ಅಂಗವಾಗಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಉತ್ಸವದ ಕೇಂದ್ರ ಬಿಂದುವಾದ ಶ್ರೀ ಸೋಮದೇವರ ಅತ್ಯಾಕರ್ಷಕ ಕುಣಿತವನ್ನು ಶ್ರಧ್ಧಾ ಭಕ್ತಿಯಿಂದ ಸಹಸ್ರಾರು ಭಕ್ತರು ವೀಕ್ಷಿಸಿದರು. ನಂತರ ಗ್ರಾಮದ ಸುತ್ತ ದೇವರ ಬವ್ಯ ಮೆರವಣಿಗೆ ಸಕಲ ಜಾನಪದ ವಾದ್ಯಗಳ ಮಧ್ಯೆ ಸಂಭ್ರಮಿಸಿತು. ಗ್ರಾಮದ ಮುಖಂಡರುಗಳು ಗ್ರಾಮಸ್ಥರು ಹಾಗೂ ಸುತ್ತ ಮುತ್ತಲ ಗ್ರಾಮಗಳಿಂದ ಆಗಮಿಸಿದ್ದ ಅಪಾರ ಭಕ್ತರು ನೆರೆದು ತಮ್ಮ ಭಕ್ತಿಯನ್ನು ಸಮರ್ಪಿಸಿದರು.

# ಶಿಕ್ಷಕರ ಮೇಲೆ ಮಕ್ಕಳ ಭವಿಷ್ಯ ರೂಪಿಸುವ ಹೊಣೆ

» **ಹೊಳಲ್ಕೆರೆ**



ಮಕ್ಕಳ ಭವಿಷ್ಯ ರೂಪಿಸುವ ಹೊಣೆ ಶಿಕ್ಷಕರುಗಳ ಮೇಲಿದೆ. ಶಿಕ್ಷಕರುಗಳ ಶ್ರಮ ತುಂಬಾ ದೊಡ್ಡದು ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಪಟ್ಟಣದ ಸಂವಿಧಾನ ಸೌಧದಲ್ಲಿ ಶಾಲಾ ಶಿಕ್ಷಣ ಇಲಾಖೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಎಸ್.ಎಸ್.ಎಲ್.ಸಿ.ಯ ಟಾಪ್-10 ಹಾಗೂ ವಿಷಯವಾರು ಶಿಕ್ಷಕರ ಯಶಸ್ಸು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಗುಣಮಟ್ಟದ ಫಲಿತಾಂಶ ಬರಬೇಕು ಹಾಗೂ ಫೇಲಾದ ವಿದ್ಯಾರ್ಥಿಗಳಿಗೆ ಒಂದು ವರ್ಷ ಹಾಳಾಗಬಾರೆಂಬ ಉದ್ದೇಶದಿಂದ ಮೂರು ಹಂತದಲ್ಲಿ ಪರೀಕ್ಷೆ ಬರುವ ವ್ಯವಸ್ಥೆಯನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದೆ. ಆದರೆ ಅವಕಾಶವಿದೆ ಎಂದು ಮೈಮರೆತು ಕೂರಬೇಡಿ. ಪ್ರಥಮ ಬಾರಿಯ ಪರೀಕ್ಷೆಯಲ್ಲಿಯೇ ಪಾಸಾಗಿ ಹೆಚ್ಚಿನ ಅಂಕಗಳನ್ನು ಗಳಿಸಿದರೆ ಮುಂದಿನ ಶಿಕ್ಷಣಕ್ಕೆ ದಾರಿ ಸುಗಮವಾಗಲಿದೆ ಎಂದು ವಿದ್ಯಾರ್ಥಿಗಳಿಗೆ ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ತಾಲ್ಲೂಕಿನಲ್ಲಿ ಗುಣಮಟ್ಟದ ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ. ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ, ಸಮವಸ್ತ್ರ, ಶೂ, ಪಠ್ಯಪುಸ್ತಕಗಳನ್ನು ನೀಡುತ್ತಿದೆ. ಪ್ರತಿ ಶಾಲೆಗಳಿಗೆ ಕಂಪ್ಯೂಟರ್‌ಗಳನ್ನುನೀಡಲಾಗಿದೆ.ಇಂದಿನ ಶಿಕ್ಷಣ ಸ್ಪರ್ಧಾತ್ಮಕವಾಗಿರುವುದರಿಂದ ಒಂದೊಂದುಅಂಕಕ್ಕೂಪ್ರಾಮುಖ್ಯತೆಯಿದೆ. ಮಕ್ಕಳನ್ನು ಇಂಜಿನಿಯರಿಂಗ್ ಹಾಗೂ ಮೆಡಿಕಲ್ ಓದಿಸುವುದು ಪೋಷಕರುಗಳಿಗೆ ಕಷ್ಟವಾಗುತ್ತದೆಎನ್ನುವುದನ್ನುಅರಿತುಹೆಚ್ಚಿನ ಅಂಕಗಳನ್ನು ಗಳಿಸುವ ಮೂಲಕ ಗುರು-ಹಿರಿಯರು ಹಾಗೂ ಪೋಷಕರುಗಳಿಗೆ ಕೀರ್ತಿ ತರಬೇಕೆಂದರು.

ಮೂರು ಹಂತದಲ್ಲಿ ಪರೀಕ್ಷೆ ಬರೆಯುವ ಅವಕಾಶವಿದೆ ಎಂದು ನಿರ್ಲಕ್ಷೆ ಮಾಡಬೇಡಿ.

ಮೊದಲ ಹಂತದಲ್ಲಿಯೇ ಪಾಸಾಗಿ. ನಿಮ್ಮ ಭವಿಷ್ಯವನ್ನು ನೀವುಗಳೆ ರೂಪಿಸಿಕೊಳ್ಳಬೇಕು. ಅತಿ ಹೆಚ್ಚು ಅಂಕಗಳನ್ನುಗಳಿಸುವುದರಿಂದ ಪಿ.ಯು.ಸಿ. ಪದವಿ ಹಾಗೂ ಉನ್ನತ ಶಿಕ್ಷಣಕ್ಕೆ ದಾರಿ ಸುಗಮವಾಗುತ್ತದೆ. ಹಾಗಾಗಿ ಶಿಕ್ಷಣದ ಕಡೆ ಹೆಚ್ಚಿನ ನಿಗಾಹರಿಸಿ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹತ್ತನೆ ತರಗತಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಶಿಕ್ಷಣಇಲಾಖೆಯನಿವೃತ್ತಸಹನಿರ್ದೇಶಕ ಹೆಚ್.ಕೆ.ಲಿಂಗರಾಜು, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಶ್ರೀನಿವಾಸ್, ಸಾರ್ವಜನಿಕ ಶಿಕ್ಷಣ ಇಲಾಖೆಯ ವಿದ್ಯಾಧಿಕಾರಿ ಎನ್. ಆರ್.ತಿಪ್ಪೇಸ್ವಾಮಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ

ತಾಲ್ಲೂಕು ಅಧ್ಯಕ್ಷ ಲೋಕೇಶ್, ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವಮೂರ್ತಿ, ಈಶ್ವರಪ್ಪ, ಸುರೇಂದ್ರನಾಥ್, ಶಾಂತಪ್ಪ, ಹಾಲೇಶ್, ಮೃತ್ಯುಂಜಯಪ್ಪ, ಶಿಕ್ಷಕರುಗಳು ಮತ್ತು ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

# ಗ್ರಾಮಗಳ ಸಮಸ್ಯೆಗಳನ್ನು ಕೂಡಲೇ ಪರಿಹರಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ ಸಚಿವ ಡಿ.ಸುಧಾಕರ್

» **ಹಿರಿಯೂರು**



ಗ್ರಾಮಗಳಲ್ಲಿ ಯಾವುದೇ ಸಮಸ್ಯೆ ಕಂಡು ಬಂದಲ್ಲಿ ಸ್ಥಳದಲ್ಲಿಯೇ ಸಂಬಂಧ ಪಟ್ಟಂತಹ ಅಧಿಕಾರಿಗಳು ಭೇಟಿ ನೀಡಿ, ಗ್ರಾಮಗಳ ಜನರ ಸಮಸ್ಯೆಗಳನ್ನು ಪರಿಶೀಲಿಸಿ, ಶೀಘ್ರದಲ್ಲೇ ಆ ಸಮಸ್ಯೆಗಳನ್ನು ಬಗ್ಗೆಹರಿಸಬೇಕು ಎಂಬುದಾಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ರವರು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ತಾಲ್ಲೂಕಿನ ಜೆಜೆಹಳ್ಳಿ ಪಂಚಾಯಿತಿ ಹಾಗೂ ಕರಿಯಾಲ ಪಂಚಾಯಿತಿ ಎಲ್ಲಾ ಗ್ರಾಮಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಭೇಟಿ ನೀಡಿ, ಗ್ರಾಮಸ್ಥರ ಕುಂದುಕೊರತೆಗಳನ್ನು ಆಲಿಸಿ ನಂತರ ಅವರು ಮಾತನಾಡಿದರು.

ಗ್ರಾಮಗಳಲ್ಲಿ ಜನರಿಗೆ ಅಗತ್ಯವಾದ ಕುಡಿಯುವ ನೀರು ಪೂರೈಕೆ ಕಾರ್ಯದಲ್ಲಿ ಗ್ರಾಮ ಪಂಚಾಯತಿ ಪಿಡಿಓಗಳು ವಿಫಲರಾಗಿದ್ದು, ಪಂಚಾಯತಿ ವ್ಯಾಪ್ತಿಯಲ್ಲಿ ನೀರಿನ ಸಮಸ್ಯೆ ಬರುವುದಕ್ಕೂ ಮುಂಚೆ ಅಧಿಕಾರಿಗಳು ಎಚ್ಚೆತ್ತುಕೊಂಡು, ತುರ್ತು ಕೆಲಸ ಮಾಡಬೇಕು ಎಂಬುದಾಗಿ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು,


ಗ್ರಾಮಗಳಲ್ಲಿ ಇರತಕ್ಕಂತಹ ನೀರಿನ ಸಮಸ್ಯೆ ವಿದ್ಯುತ್ ಸಮಸ್ಯೆ ರಸ್ತೆಗಳ ಅಭಿವೃದ್ಧಿ ಬಗ್ಗೆ ಗ್ರಾಮಸ್ಥರಲ್ಲಿ ಕುಂದು ಕೊರತೆ ಬಗ್ಗೆ ವಿಚಾರಿಸಿದ, ಅವರು ಗ್ರಾಮದ ಎಲ್ಲಾ ಸಮಸ್ಯೆಗಳನ್ನು ಶೀಘ್ರವಾಗಿ ಪರಿಸಬೇಕು, ಸಣ್ಣ ಸಣ್ಣ ವಿಚಾರಕ್ಕೆಲ್ಲ ನಗರದಲ್ಲಿರುವ ನನ್ನ ಕಚೇರಿಗೆ ಜನರನ್ನು ಅಲೆಯುವಂತೆ ಮಾಡಬೇಡಿ ಎಂಬುದಾಗಿ ಅಧಿಕಾರಿಗಳಿಗೆ ಸಚಿವರು ತಾಕೀತು ಮಾಡಿದರು.

ಈ ಸಂದರ್ಭದಲ್ಲಿ ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಖಾದಿರಮೇಶ್, ಜಿಲ್ಲಾಪಂಚಾಯತಿ ಮಾಜಿ ಸದಸ್ಯ ನಾಗೇಂದ್ರ ನಾಯ್ಕ್, ಮುಖಂಡರುಗಳಾದ ಪಿ.ಎಸ್.ಪಾತಯ್ಯ, ಜೆಜೆಹಳ್ಳಿ ಪಂಚಾಯತಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪುಟ್ಟರಾಜು, ಅಧ್ಯಕ್ಷ ಮಂಜುನಾಥ್, ನರಸಿಂಹಸ್ವಾಮಿ, ಮಾಜಿ ಎಪಿಎಂಸಿ ಅಧ್ಯಕ್ಷ ವೇದಮೂರ್ತಿ, ಮಾಜಿ ತಾಲೂಕು ಪಂಚಾಯತಿ ಸದಸ್ಯ ತಿಪ್ಪಮ್ಮ, ಫಕ್ರುದ್ದೀನ್, ಚಿತ್ರಲಿಂಗಪ್ಪ, ಶ್ರೀನಿವಾಸ್ ನಾಯಕ, ಗಿರೀಶ್, ಕಾರ್ಮಿಕ ಘಟಕದ ಅಧ್ಯಕ್ಷ ಶಿವಕುಮಾರ್, ಜೆಜಿಹಳ್ಳಿ ಗ್ರಾಮ ಪಂಚಾಯತಿ ಅಧ್ಯಕ್ಷ ಅಲ್ತಾಫ್, ಕರಿಯಲ ಗ್ರಾಮ ಪಂಚಾಯತಿ ಅಧ್ಯಕ್ಷೆ ವಿಜಯಮ್ಮ, ಉಪಾಧ್ಯಕ್ಷ ರಾಮಣ್ಣ, ಪ್ರಶಾಂತ್, ಗ್ರಾಮ ಪಂಚಾಯತಿ ಸದಸ್ಯೆ ಮಂಜುಳಾಉಮೇಶ್, ಗ್ರಾಮ ಪಂಚಾಯತಿ ಸದಸ್ಯ ಭರತ್, ಆಲಿ ಸಾಬ್, ಮಂಗಳಮ್ಮ, ಶಬನಾ, ಪರ್ವಿನ್, ಕೃಷ್ಣಪ್ಪ ಮಾರಣ್ಣ, ಭೂತೇಶ್, ಮೈಲಾರಪ್ಪ, ಪಾತಪ್ಪ, ರಮೇಶ್, ಪರಶುರಾಮಣ್ಣ, ನಾಗರಾಜ್, ನಾಗೇಂದ್ರಪ್ಪ, ಮಹೇಶ್, ಸೀನಪ್ಪ ಸೇರಿದಂತೆ ಅನೇಕ ಮುಖಂಡರು ಹಾಜರಿದ್ದರು.

# ಚಳ್ಳಕೆರೆ ಪೌರಕಾರ್ಮಿಕರ ಆರೋಗ್ಯ ತಪಾಸಣೆ



**ಚಳ್ಳಕೆರೆ:** ನಗರಸಭೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಕಾರ್ಮಿಕರ ಆರೋಗ್ಯ ತಪಾಸಣೆಯನ್ನು ಸರ್ಕಾರದ ನಿರ್ದೇಶನದಂತೆ ಚಿತ್ರದುರ್ಗ ಪ್ರತಿಷ್ಠಿತ ಖಾಸಗಿ ಆಸ್ಪತ್ರೆಯಲ್ಲಿ ಪೌರಾಯುಕ್ತ ಸಿ.ಚಂದ್ರಪ್ಪ ಮಾರ್ಗದರ್ಶನದಲ್ಲಿ ನಡೆಸಲಾಯಿತು ಎಂದು ನೈರ್ಮಲ್ಯ ಇಂಜಿನಿಯರ್ ನರೇಂದ್ರಬಾಬು ತಿಳಿಸಿದ್ದಾರೆ.ಅವರು, ಪತ್ರಿಕೆಗೆ ಮಾಹಿತಿ ನೀಡಿ, ಪ್ರತಿವರ್ಷ ಎರಡು ಬಾರಿ ನಗರಸಭೆಯಲ್ಲಿ ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುತ್ತಿರುವ ಎಲ್ಲರಿಗೂ ಆರೋಗ್ಯ ತಪಾಸಣೆ ನಡೆಸಲಾಗುತ್ತದೆ. ಎಲ್ಲಾ ಪೌರಕಾರ್ಮಿಕರು ಖುದ್ದಾಗಿ ಆರೋಗ್ಯ ತಪಾಸಣೆಗೆ ಹಾಜರಾಗುವಂತೆ ನಿರ್ದೇಶನ ನೀಡಲಾಗಿದೆ. ಇದಕ್ಕೆ ಸಂಬಂಧಪಟ್ಟಂತೆ ಎಲ್ಲಾ ಆರೋಗ್ಯ ನಿರೀಕ್ಷರೂ ಸಹ ಈ ಕಾರ್ಯದಲ್ಲಿ ಭಾಗವಹಿಸಿ ಪೌರಕಾರ್ಮಿಕರ ಆರೋಗ್ಯ ತಪಾಸಣೆಗೆ ಸಹಕಾರ ನೀಡಿದ್ದಾರೆಂದು ತಿಳಿಸಿದ್ದಾರೆ. ಖಾಸಗಿ ಆಸ್ಪತ್ರೆಯ ಹಿರಿಯ ಆರೋಗ್ಯ ತಜ್ಞರಿಂದ ಪೌರಕಾರ್ಮಿಕರ ಆರೋಗ್ಯ ತಪಾಸಣೆ ನಡೆಸಲಾಯಿತು. ಈಗಾಗಲೇ ರಾಜ್ಯದಲ್ಲಿ ಜೆಎನ್-1 ಕೊರೋನಾ ರೂಪಾಂತರಿ ವ್ಯಾಪ್ತಿಸುತ್ತಿದ್ದು, ಹಲವರಲ್ಲಿ ಗಾಬರಿ ಉಂಟು ಮಾಡಿದೆ. ಈ ಬಗ್ಗೆಯೂ ಸಹ ನಗರಸಭೆ ಆಡಳಿತ ಎಲ್ಲಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುತ್ತಿದೆ. ಮೊದಲ ಹಂತವಾಗಿ ಸಾರ್ವಜನಿಕರ ಆರೋಗ್ಯ ಹಾಗೂ ನೈರ್ಮಲ್ಯವನ್ನು ಸುಸ್ಥಿತಿಯಲ್ಲಿಡುವ ದೃಷ್ಠಿಯಿಂದ ಆರೋಗ್ಯ ತಪಾಸಣೆ ನಡೆಸಲಾಗುತ್ತಿದೆ ಎಂದರು.ಹಿರಿಯ ಆರೋಗ್ಯ ನಿರೀಕ್ಷಕರಾದ ಗಣೇಶ್ ಮೊದಲಾವದರು ಇದ್ದರು.



### ಬಿಜೆಪಿ ನೂತನ ಜಿಲ್ಲಾಧ್ಯಕ್ಷರಿಗೆ ಅಭನಂದನೆ

**ತಳಕು ಮತ್ತು ನಾಯಕನಹಟ್ಟಿ ಮಂಡಲದ ಅಧ್ಯಕ್ಷ ಸ್ಥಾನದ ಪ್ರಬಲ ಅಕಾಂಕ್ಷಿ ಎಂ.ಎಸ್.ರವಿಕುಮಾರ್, ಹೆಚ್.ವಿ. ಪ್ರಕಾಶ್‌ರೆಡ್ಡಿ, ವೈ. ಗುರುಮೂರ್ತಿ, ಚಿಕ್ಕಮ್ಮನಹಳ್ಳಿ ರಾಜಣ್ಣ 2 ಭಾರಿ ಬಿ.ಜೆ.ಪಿ. ಪಕ್ಷದ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾಗಿರುವ ಮುರುಳಿಯವರಿಗೆ ಅಭಿನಂದನೆಗಳನ್ನು ಸಲ್ಲಿಸಿದರು.**

### ಕಾಮಗಾರಿ ಪರಿವೀಕ್ಷಣೆ

**ಹಾವೇರಿ:** ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಹಂತ-3ರ ಕಾಮಗಾರಿಗಳನ್ನು ನ್ಯಾಷನ್ ಕ್ವಾಲಿಟಿ ಮಾನೀಟರ್ ಬಿನಯಕುಮಾರ ಸಿಂಹಾ ಅವರು ಜನವರಿ 17 ರಿಂದ ಪರಿವೀಕ್ಷಣೆ ಮಾಡಲಿದ್ದಾರೆ ಎಂದು ಹಾವೇರಿ ಯೋಜನಾ ಅನುಷ್ಠಾನ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ನೀರಿನ ಸಮಸ್ಯಾತ್ಮಕ ಗ್ರಾಮಗಳಿಗೆ ತೊಂದರೆಯಾಗದಂತೆ ಕ್ರಮ ವಹಿಸಿ

» **ಮೊದಲ ಪುಟದಿಂದ**



**ಹೊಸ ಟೆಂಡರ್ ಕರೆಯಲು ಸೂಚನೆ:** ಜಿಲ್ಲೆಯ ವಸತಿ ನಿಲಯಗಳಿಗೆ ಗುಣಮಟ್ಟದ ಆಹಾರ ಸಾಮಗ್ರಿ ಸರಬರಾಜು, ಪ್ರತಿ ದಿನ ತಾಜಾ ಸೊಪ್ಪು, ತರಕಾರಿ ಖರೀದಿಸುವ ವ್ಯವಸ್ಥೆಯಾಗಬೇಕು.ಇದುಸಮರ್ಪಕವಾಗಿ ಅನುಷ್ಠಾನವಾಗಬೇಕು. ಈ ಹಿನ್ನಲೆಯಲ್ಲಿ ಹೊಸದಾಗಿ ಟೆಂಡರ್ ಕರೆಯುವಂತೆ ಸಚಿವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗೆ ಸೂಚನೆ ನೀಡಿದರು.ಅಧಿಕಾರಿಗಳು ಹಾಸ್ಟೆಲ್‌ಗೆ ತೆರಳಿ ಪರಿಶೀಲಿಸಿ ವಿದ್ಯಾರ್ಥಿಗಳ ಕುಂದುಕೊರತೆ ಆಲಿಸಿ, ಅವರ ಸಮಸ್ಯೆಗಳು, ದೂರುಗಳಿಗೆ ಸ್ಪಂದಿಸಬೇಕು ಎಂದು ತಿಳಿಸಿದರು.

ಮಕ್ಕಳ ಊಟದಲ್ಲಿ ರಾಜಕೀಯ ಮಾಡುವಂತಹ ಟೆಂಡರ್‌ದಾರರು ನಮಗೆ ಬೇಡ. ಹೈಕೋರ್ಟ್ ಹೊಸ ಟೆಂಡರ್ ಕರೆಯಲು ತಿಳಿಸಿದೆ. ಹೀಗಾಗಿ ಹೊಸ ಟೆಂಡರ್ ಕರೆಯಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಆಮ್ಲಾನ್ ಆದಿತ್ಯ ಬಿಸ್ವಾಸ್ ತಿಳಿಸಿದರು. ಹಾಸ್ಟೆಲ್‌ಗೆ ಖುದ್ದು ಭೇಟಿ ನೀಡಲಾಗಿದ್ದು, ತಾಜಾ ತರಕಾರಿ, ಉತ್ತಮ ಆಹಾರ, ಪರಿಕರ ವಿತರಣೆಗೆ ನಿರ್ದೇಶನ ನೀಡಲಾಗಿದೆ ಎಂದು ಜಿ.ಪಂ ಸಿಇಒ ಎಸ್.ಜೆ.ಸೋಮಶೇಖರ್ ತಿಳಿಸಿದರು.

**ಅನಾವಶ್ಯಕ ಡಿವೈಡರ್ ತೆರವಿಗೆ ತಾಕೀತು:** ಚಿತ್ರದುರ್ಗ ನಗರದಲ್ಲಿ ನಿರ್ಮಿಸಲಾಗಿರುವ ಡಿವೈಡರ್‌ಗಳು ನಿಯಮಾನುಸಾರ ಇದೆಯೋ ಇಲ್ಲವೋ ಎಂದು ತನಿಖಾ ತಂಡ ಪರಿಶೀಲಿಸಿದ್ದು, ವರದಿ ಸಲ್ಲಿಸಬೇಕಿದೆ. ವರದಿ ಪರಿಶೀಲನೆ ಬಳಿಕ ಕ್ರಮ ವಹಿಸಲಾಗುವುದು ಎಂದು ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಅಭಿಯಂತರ ಮಲ್ಲಿಕಾರ್ಜುನ್ ಹೇಳಿದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಚಿತ್ರದುರ್ಗ ನಗರದ ದಾವಣಗೆರೆ ರಸ್ತೆ ಮಾರ್ಗದ ಒನ್‌ವೇ ರಸ್ತೆಯಲ್ಲೂ ಡಿವೈಡರ್ ಹಾಕಿದ್ದೀರಾ. ನಗರದಲ್ಲಿ ನಿರ್ಮಿಸಿರುವ ಡಿವೈಡರ್‌ಗಳನ್ನು ತೆರವುಗೊಳಿಸುವ ಬಗ್ಗೆ ವಿಚಕ್ಷಣದಳ ಅಧಿಕಾರಿಗಳು ಪರಿಶೀಲನೆ ನಡೆಸಿದ್ದು, ಪರಿವೀಕ್ಷಣಾ ವರದಿ ನಂತರ ವರದಿಯಲ್ಲಿ ಸೂಚಿಸಿರುವಂತೆ ಡಿವೈಡರ್ ತೆರವುಗೊಳಿಸಬೇಕು. ಅನಾವಶ್ಯಕ ಡಿವೈಡರ್‌ಗಳ ತೆರವುಗೊಳಿಸಬೇಕು ಎಂಬುದು ಜನರ ಬೇಡಿಕೆಯಾಗಿದ್ದು, ಚುನಾವಣೆ ನೀತಿ ಸಂಹಿತೆ ಬರುವ ಮೊದಲೇ ತೆರವುಕಾರ್ಯ ಆಗಬೇಕು. ಎಲ್ಲೆಲ್ಲಿ ಅವಶ್ಯ ಇದೆಯೋ ಆ ಕಡೆ ಡಿವೈಡರ್‌ಗಳನ್ನು ಉಳಿಸಿಕೊಂಡು, ಅವಶ್ಯ ಇಲ್ಲದಿರುವ ಕಡೆ ಡಿವೈಡರ್ ತೆರವುಗೊಳಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

**ರೈತರಿಗೆ ಬರ ಪರಿಹಾರ ಶೀಘ್ರ :** ಮಳೆಯ ಕೊರತೆಯಿಂದಾಗಿ ಜಿಲ್ಲೆಯ 06 ತಾಲ್ಲೂಕುಗಳನ್ನು ಈಗಾಗಲೆ ಬರ ಪೀಡಿತ ಪ್ರದೇಶವೆಂದು ಘೋಷಿಸಲಾಗಿದ್ದು, ಜಿಲ್ಲೆಯಲ್ಲಿ 2.35 ಲಕ್ಷ ಹೆ. ನಲ್ಲಿ ಬೆಳೆ ಹಾನಿಯಾಗಿದೆ. ಹೀಗಾಗಿ ನಿಯಮಾನುಸಾರ ಇನ್‌ಪುಟ್ ಸಬ್ಸಿಡಿ ನೀಡುವಂತೆ ಜಿಲ್ಲೆಯಿಂದ ಪ್ರಸ್ತಾವನೆ ಸಲ್ಲಿಕೆಯಾಗಿದೆ. ಬೆಳೆ ಪರಿಹಾರ ಪಾವತಿಯಲ್ಲಿ ದುರುಪಯೋಗ ತಡೆಯಲು ಈ ಬಾರಿ ಫ್ರುಟ್ಸ್ ತಂತ್ರಾಂಶ ಹಾಗೂ ಬೆಳೆ ಕಟಾವು ಸಮೀಕ್ಷೆ ಆಧಾರದಲ್ಲಿ ಪರಿಹಾರವನ್ನು ರೈತರ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುವುದು. ರಾಜ್ಯ ಸರ್ಕಾರದಿಂದಲೇ ರೈತರಿಗೆ ಗರಿಷ್ಠ 2 ಸಾವಿರ ಪರಿಹಾರವನ್ನು ಪಾವತಿಸಲು ಅಗತ್ಯ ದತ್ತಾಂಶವನ್ನು ಈಗಾಗಲೆ ಸಲ್ಲಿಸಲಾಗಿದ್ದು, ಶೀಘ್ರವೇ ಪರಿಹಾರ ಮೊತ್ತ ರೈತರಿಗೆ ಪಾವತಿಯಾಗಲಿದೆ ಎಂದು ಜಂಟಿಕೃಷಿ ನಿರ್ದೇಶಕ ಮಂಜುನಾಥ್ ತಿಳಿಸಿದರು. ಜಿಲ್ಲಾಧಿಕಾರಿಗಳು ಮಾತನಾಡಿ, ಫ್ರುಟ್ಸ್ ತಂತ್ರಾಂಶದಲ್ಲಿ ಮಾಹಿತಿ ಜೋಡಣೆ ಕಾರ್ಯ ಜಿಲ್ಲೆಯಲ್ಲಿ ಈಗಾಗಲೆ ಶೇ. 81 ರಷ್ಟು ಪೂರ್ಣಗೊಂಡಿದ್ದು, ರೈತ ಸಮುದಾಯದಲ್ಲಿ ಈ ಬಗ್ಗೆ ವ್ಯಾಪಕ ತಿಳುವಳಿಕೆ ನೀಡುವ ಕಾರ್ಯ ನಡೆಯುತ್ತಿದೆ ಎಂದರು.

ಹೊಸದುರ್ಗ ಶಾಸಕ ಬಿ.ಜಿ. ಗೋವಿಂದಪ್ಪ ಅವರು ಮಾತನಾಡಿ, ಪ.ಜಾತಿ, ಪ.ಪಂಗಡ, ಅಲ್ಪಸಂಖ್ಯಾತರ, ಹಿಂದುಳಿದ ವರ್ಗಗಳ ಕಲ್ಯಾಣ ಸೇರಿದಂತೆ ಯಾವುದೇ ಹಾಸ್ಟೆಲ್‌ಗಳಿಗೆ ಗ್ರಾಮೀಣ ಭಾಗಗಳಿಂದ ಎಷ್ಟೇ ವಿದ್ಯಾರ್ಥಿಗಳು ಬಂದರೂ ಅಂತಹ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ದಾಖಲಿಗೆ ನಿರಾಕರಿಸಬಾರದು, ಅಗತ್ಯಬಿದ್ದರೆ, ಹೆಚ್ಚುವರಿ ಸ್ಥಾನಗಳನ್ನು ಸರ್ಕಾರದಿಂದ ಮಂಜೂರಾತಿ ಪಡೆಯಬಹುದು. ಒಟ್ಟಾರೆ ಹಾಸ್ಟೆಲ್ ಪ್ರವೇಶ ಕೋರಿ ಬರುವ ಹಳ್ಳಿಯ ಮಕ್ಕಳಿಗೆ ಹಾಸ್ಟೆಲ್‌ನಲ್ಲಿ ಪ್ರವೇಶ ದೊರೆಯಬೇಕು ಎಂದು ಸೂಚನೆ ನೀಡಿದರು.

ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ ಮಾತನಾಡಿ, ವಿವಿಧ ಅಭಿವೃದ್ಧಿ ನಿಗಮಗಳಡಿ ಗಂಗಾ ಕಲ್ಯಾಣ, ನೇರ ಸಾಲ ಮತ್ತಿತರ ಯೋಜನೆಗಳಿಗೆ ಆನ್‌ಲೈನ್ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸಲ್ಲಿಕೆಯಾಗುತ್ತಿವೆ. ಆದರೆ ನಿಗದಿತ ಗುರಿ ಸಂಖ್ಯೆ ಮಾತ್ರ ಕೇವಲ ಬೆರಳಣಿಕೆಯಷ್ಟು ಇದೆ. ಹೀಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಜನರಿಗೆ ಸರ್ಕಾರದ ಸವಲತ್ತು ದೊರೆಯುವಂತಾಗಬೇಕು. ಈ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚರ್ಚೆಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಡಾ.ಎಂ.ಚಂದ್ರಪ್ಪ, ಕೆಡಿಪಿ ನಾಮನಿರ್ದೇಶಿತ ಸದಸ್ಯರಾದ ತಿಮ್ಮಯ್ಯ, ಕೆ.ಸಿ.ನಾಗರಾಜು, ಖಲೀಮುಲ್ಲಾ, ರಂಗಸ್ವಾಮಿ, ದೀಪಿಕಾ, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರಾದ ಅಮ್ಲಾನ್ ಆದಿತ್ಯ ಬಿಸ್ವಾಸ್, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

# ಜಾತಿ ಲೆಕ್ಕಚಾರದಲ್ಲಿ ಹನುಮಂತೇಗೌಡಗೆ ಒಲಿದ ಮಧುಗಿರಿ ಬಿಜೆಪಿ ಜಿಲ್ಲಾಧ್ಯಕ್ಷ ಸ್ಥಾನ

» **ತುಮಕೂರು**

ತುಮಕೂರು ಜಿಲ್ಲೆಯಲ್ಲಿನ ಮಧುಗಿರಿ ಶೈಕ್ಷಣಿಕ ಮತ್ತು ರಾಜಕೀಯ ಸಂಘಟನೆ ಜಿಲ್ಲೆಯಾಗಿ ಪರಿಗಣಿಸಿರುವ ರಾಜ್ಯ ಬಿಜೆಪಿ ಮಧುಗಿರಿ ಜಿಲ್ಲಾ ಘಟಕದ ಅಧ್ಯಕ್ಷರ ಅವಧಿ ಪೂರ್ಣಗೊಳ್ಳುವ ಮೊದಲೇ ಬದಲಾವಣೆ ಮಾಡಿದ್ದು ನೂತನ ಅಧ್ಯಕ್ಷರನ್ನಾಗಿ ಯುವ ಮುಖಂಡ ಸಂಘಟನ ಚತುರ ಪಕ್ಷದ ನಿಷ್ಠಾವಂತ ಕಾರ್ಯಕರ್ತ ಮಾಜಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ ಬಿ.ಸಿ.ಹನುಮಂತೇಗೌಡ ಅವರನ್ನು ನೇಮಕ ಮಾಡುವ ಮೂಲಕ ಹಲವು ರಾಜಕೀಯ ಲೆಕ್ಕಚಾರ ಮಾಡಿದಂತಿದೆ.

ಮುಂಬರುವ ಲೋಕಸಭೆ ಚುನಾವಣೆಯನ್ನು ದೃಷ್ಟಿ ಹಾಯಿಸಿ ಈ ಬದಲಾವಣೆ ಮಾಡಿದ್ದು, ಜಾತಿ ಸಮೀಕರಣದ ಆಧಾರದ ಮೇಲೆ ನೂತನ ಅಧ್ಯಕ್ಷರನ್ನು ನೇಮಿಸಲಾಗಿದೆ ಎಂದು ಪಕ್ಷ ಹಾಗೂ ರಾಜಕೀಯ ವಲಯದಲ್ಲಿ ರಾಜಕೀಯ ಪಂಡಿತರು ವಿಶ್ಲೇಷಣೆ ಮಾಡಲಾರಂಭಿಸಿದ್ದಾರೆ.

ಹಿಂದುಳಿದ ಕುರುಬ ಸಮುದಾಯದ ಬಿ.ಕೆ.ಮಂಜುನಾಥ್ ಅಧ್ಯಕ್ಷರಾಗಿದ್ದು ಅವರ ಜಾಗಕ್ಕೆ ಕುಂಚಿಟಿಗ ಒಕ್ಕಲಿಗ ಸಮುದಾಯದ ಹನುಮಂತೇಗೌಡ ಅವರನ್ನು ತರಲಾಗಿದೆ. ತುಮಕೂರು ಸಂಘಟನಾತ್ಮಕ ಜಿಲ್ಲೆಯ ಅಧ್ಯಕ್ಷರಾಗಿರುವ ಲಿಂಗಾಯತ ಸಮುದಾಯದ ಎಚ್.ಎಸ್. ರವಿಶಂಕರ್ ಅವರನ್ನು ಉಳಿಸಿಕೊಂಡು, ಮಧುಗಿರಿ ಭಾಗದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವ ಕುಂಚಿಟಿಗರ ಮತಗಳ





ಮೇಲೆ ಕಣ್ಣಿಟ್ಟು ನೇಮಕ ಮಾಡಲಾಗಿದೆ. ಲಿಂಗಾಯತ ಹಾಗೂ ಒಕ್ಕಲಿಗರ ಮತಗಳ ಸಮೀಕರಣದೊಂದಿಗೆ ಲೋಕಸಭೆ ಚುನಾವಣೆ ಎದುರಿಸಲು ಬಿಜೆಪಿ ರಾಜ್ಯ ಘಟಕದ ನೂತನ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಮಹಾ ಪ್ಲಾನ್ ಮಾಡಿ ರೆಡಿಯಾಗಿದ್ದಾರೆ.



**ಮಧುಗಿರಿ ಮಣ್ಣಿನ ಮಗನಿಗೆ ಒಲಿದ ಅಧ್ಯಕ್ಷ ಸ್ಥಾನ:** ತುಮಕೂರು ಜಿಲ್ಲೆಯ ಮಧುಗಿರಿ ತಾಲ್ಲೂಕು ದೊಡ್ಡೇರಿ ಹೋಬಳಿ ಭೀಮನಕುಂಟೆ ಗ್ರಾಮದವರಾದ ಹನುಮಂತೇಗೌಡ ಕಳೆದ ವಿಧಾನಸಭೆ ಚುನಾವಣೆಯಲ್ಲಿ ಮಧುಗಿರಿ ವಿಧಾನಸಭೆ ಕ್ಷೇತ್ರದಿಂದ ಸ್ಪರ್ಧೆಗೆ ಟಿಕೆಟ್ ಪೈಪೋಟಿ ನಡೆಸಿ ಸಂಘಟನೆ ಸಹ ಮಾಡಿದ್ದರು. ಆದರೆ ಕೊನೆ ಘಳಿಗೆಯಲ್ಲಿ ಟಿಕೆಟ್ ಕೈ ತಪ್ಪಿತು. ಚಿತ್ರದುರ್ಗದಲ್ಲಿ ಶಿಕ್ಷಣ ಪಡೆದು, ಅಲ್ಲೇ ರಾಜಕೀಯ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದು ಚಿತ್ರದುರ್ಗ ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷನಾಗಿ ಪಕ್ಷ ಸಂಘಟನೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಕಳೆದ ಚುನಾವಣೆ ಸಮಯದಲ್ಲಿ ಮಧುಗಿರಿ ಭಾಗದಲ್ಲಿ ಸಕ್ರಿಯವಾಗಿದ್ದರು. ಕೆಲವು ಸಾಮಾಜಿಕ ಚಟುವಟಿಕೆಗಳ ಮೂಲಕ ಗುರುತಿಸಿಕೊಂಡಿದ್ದರು.

ವಿಧಾನಸಭೆಗೆ ಚುನಾವಣೆ ನಂತರ ಕ್ಷೇತ್ರದಲ್ಲಿ ಅಷ್ಟಾಗಿ ಕಾಣಿಸಿಕೊಂಡಿರಲಿಲ್ಲ. ವಿಜಯೇಂದ್ರ ಅವರಿಗೆ ಆಪ್ತರಾಗಿರುವುದರಿಂದ ನೇಮಕ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಪಕ್ಷ ಸಂಘಟನೆಯಲ್ಲಿ ತೊಡಗಿಸಿಕೊಳ್ಳಲಿದ್ದಾರೆ ಎಂದು ಹೇಳಲಾಗುತ್ತಿದೆ.

**ಜಿಲ್ಲೆಯನ್ನು ಒಗ್ಗೂಡಿಸುವ ಪ್ರಯತ್ನ ವಿಫಲ:** ಪಕ್ಷ ಸಂಘಟನೆ ದೃಷ್ಟಿಯಿಂದ ತುಮಕೂರು ಜಿಲ್ಲೆಯಿಂದ ಮಧುಗಿರಿ ಭಾಗವನ್ನು ಪ್ರತ್ಯೇಕಿಸಿ ಜಿಲ್ಲಾ ಘಟಕದ ಅಧ್ಯಕ್ಷರನ್ನು ನೇಮಕ ಮಾಡುವಂತೆ ಜಿಲ್ಲೆಯ ಪಕ್ಷದ ಪ್ರಮುಖರು ಹಿಂದೆ ಒತ್ತಾಯಿಸಿದ್ದರು. ಅದರಂತೆ ಮಧುಗಿರಿ ಜಿಲ್ಲೆಗೆ ಪ್ರತ್ಯೇಕವಾಗಿ ಅಧ್ಯಕ್ಷರನ್ನು ನೇಮಕ ಮಾಡಲಾಗಿತ್ತು. ಇತ್ತೀಚೆಗೆ ಕೆಲವರು ಎರಡು ಸಂಘಟನಾತ್ಮಕ ಜಿಲ್ಲೆಯನ್ನು ಒಗ್ಗೂಡಿ ಒಬ್ಬರನ್ನೇ ಅಧ್ಯಕ್ಷರನ್ನಾಗಿ ನೇಮಕ ಮಾಡಬೇಕು ಎಂದು ಸಲಹೆ ನೀಡಿದ್ದರು. ಆದರೆ ಈ ಸಲಹೆಗೆ ಹೈಕಮಾಂಡ್ ಗಮನ ಸೊಪ್ಪು ಹಾಕದೇ ಮಧುಗಿರಿಗೆ ಅಧ್ಯಕ್ಷರ ನೇಮಕ ಮಾಡುವ ಮೂಲಕ ರಾಜಕೀಯವಾಗಿ ಪಕ್ಷ ಸಂಘಟಿಸಲು ಮುಂದಾಗಿದೆ.

**ಹನುಮಂತೇಗೌಡ ಅವರ ಜರ್ನಿ:** ಹನುಮಂತೇಗೌಡ ಅವರು ಕಳೆದ 12 ವರ್ಷಗಳಿಂದ ನಿರಂತರವಾಗಿ ಎಬಿವಿಪಿ ಸಂಘಟನೆಯಲ್ಲಿ ತೊಡಗಿಕೊಂಡು ರಾಜ್ಯ ಮಟ್ಟದಲ್ಲಿ ಎಬಿವಿಪಿಯ ರಾಜ್ಯ ಸಹ ಕಾರ್ಯದರ್ಶಿ, ಜಿಲ್ಲಾ ಪ್ರಮುಖ್ ಆಗಿ ಸೇವೆ ಸಲ್ಲಿಸಿ ಕಳೆದ 5 ವರ್ಷಗಳಿಂದ ನೇರವಾಗಿ ಬಿಜೆಪಿಯಲ್ಲಿ ಗುರುತಿಸಿಕೊಂಡು ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷ , ಶಿರಾ ವಿಧಾನಸಭಾಕ್ಷೇತ್ರದಉಪಚುನಾವಣೆಯಲ್ಲಿ ಕೆಲಸ ನಿರ್ವಹಿಸಿದ್ದರು.ತದನಂತರ ಮಧುಗಿರಿ ವಿಧಾನಸಭಾ ಕ್ಷೇತ್ರಕ್ಕೆ ಎಂಟ್ರಿ ಕೊಟ್ಟು ಹನುಮಂತೇಗೌಡರು ನೆಲೆ ಇಲ್ಲದ ಬಿಜೆಪಿ ಪಕ್ಷಕ್ಕೆ ಸಂಘಟನೆ ಮೂಲಕ ಕಾರ್ಯಕರ್ತರಲ್ಲಿ ಹುರುಪು ಮೂಡಿಸಿ ಪಕ್ಷಕ್ಕೆ ಹೊಸ ಉತ್ಸಾಹ ತುಂಬಿದರು. ಸಾಮಾಜಿಕ, ಶೈಕ್ಷಣಿಕ ಕಾರ್ಯಕ್ರಮ ಮೂಲಕ ಅತಿ ಕಡಿಮೆ ಅವಧಿಯಲ್ಲಿ ಹೆಚ್ಚು ಜನಪ್ರಿಯತೆ ಗಳಿಸಿದ ಕೀರ್ತಿ ಹನುಮಂತೇಗೌಡರದು ಎಂದರೆ ತಪ್ಪಗಲಾರದು.

ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆ ಸೇರಿದಂತೆ ರಾಜ್ಯದಲ್ಲಿ ವಿದ್ಯಾರ್ಥಿದೆಸೆಯಲ್ಲಿ ನೂರಾರು ಹೋರಾಟ ಕಟ್ಟಿರುವ ಇವರು ಬಿಇ. ಎಂಟೆಕ್ ಉನ್ನತ ಶಿಕ್ಷಣ ಪಡೆದು ಶಿಕ್ಷಣ ಪಡೆದಿದ್ದಾರೆ.

ಪಕ್ಷ ಸಂಘಟನೆಯಲ್ಲಿ ವಿಜಯೇಂದ್ರ ಅವರ ಜೊತೆ ನಿಕಟ ಸಂಪರ್ಕದ ಸಾಧಿಸಿರುವ ಹನುಮಂತೇಗೌಡರು ಅವರ ಕೆಲಸಕ್ಕೆ ತಕ್ಕ ಫಲ ಎಂಬಂತೆ ಮಧುಗಿರಿ ಜಿಲ್ಲೆಯ ಜಿಲ್ಲಾಧ್ಯಕ್ಷ ಸ್ಥಾನ ಒಲಿದು ಬಂದಿದೆ. ಪಕ್ಷಕ್ಕೆ ದುಡಿದರೆ ಪಕ್ಷ ತನಗೆ ಕೇಳದೇ ಸ್ಥಾನಮಾನ ಕೊಡುತ್ತದೆ ಎಂಬುದಕ್ಕೆಇದೊಂದು ನಿದರ್ಶನವಾಗಿದೆ.

# ಕಾನೂನು ಪಾಲನೆ, ಪ್ರತಿಯೊಬ್ಬರ ಆದ್ಯಕರ್ತವ್ಯ

» **ದಾವಣಗೆರೆ**

ಕಾನೂನು ಎಲ್ಲರಿಗೂ ಒಂದೇ. ಯಾರೇ ವಾಹನಗಳನ್ನು ಚಾಲನೆ ಮಾಡಿದರೂ ಪ್ರತಿಯೊಬ್ಬರೂ ಮೋಟಾರು ವಾಹನ ಕಾಯಿದೆ ಪಾಲನೆ ಮಾಡಬೇಕಾದುದು ಆದ್ಯಕರ್ತವ್ಯ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು, ದಾವಣಗೆರೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಮಹಾವೀರ ಮ. ಕರೆಣವರ್ ತಿಳಿಸಿದರು.

ನಗರದ ಆರ್ ಟಿಓ ಕಚೇರಿಯ ಸಭಾಂಗಣದಲ್ಲಿ ಸಾರಿಗೆ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಹಾಗೂ ಜಿಲ್ಲಾ ವಕೀಲರ ಸಂಘ ದಾವಣಗೆರೆ ಇವರ ಸಹಯೋಗದೊಂದಿಗೆ ಬುಧವಾರ ಆಯೋಜಿಸಲಾಗಿದ್ದ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹ 2024 ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಯಾರೇ, ಯಾವುದೇ ವಾಹನಗಳನ್ನು ಬಳಕೆ ಮಾಡಲಿ, ಬಳಕೆ ಜತೆ ಕಾನೂನು, ಕಾಯಿದೆಗಳನ್ನು ತಿಳಿದುಕೊಳ್ಳುವುದು ಅಗತ್ಯ. ಆಗ ಮಾತ್ರ ನಾವು ವಾಹನ ಚಾಲನೆ ಮಾಡಲು ಅರ್ಹತೆ ಹೊಂದಿರುತ್ತೇವೆ. ಒಂದು ವೇಳೆ ನಮಗೆ ಕಾನೂನು ಗೊತ್ತಿಲ್ಲ ಎನ್ನುವ ನಿರ್ಲಕ್ಷ್ಯ ಮಾತುಗಳಿಗೆ ಅವಕಾಶ ಇರುವುದಿಲ್ಲ ಎಂದು ಹೇಳಿದರು.

ಮೋಟಾರು ವಾಹನ ಕಾಯಿದೆಗಳನ್ನು ನಾವು ಏಕೆ ತಿಳಿದುಕೊಳ್ಳಬೇಕು. ಯಾವ ರೀತಿ ಪಾಲನೆ ಮಾಡಬೇಕು. ಕಾನೂನನ್ನು ಅಧಿನಿಯಮ ಗಳನ್ನು ಪಾಲನೆ ಮಾಡುವುದು ನಮ್ಮ ದೇಶದಲ್ಲಿ ಕಡ್ಡಾಯ. ಒಂದು ವೇಳೆ ಪಾಲನೆ ಮಾಡದೇ ಕಾನೂನು ಉಲ್ಲಂಘನೆ ಮಾಡಿದರೆ ದಂಡ ಕಟ್ಟಿದರೆ ಸಾಕು ಎನ್ನುವ ಮನೋಭಾವ ಬರಬಾರದು. ಕಾನೂನು ಉಲ್ಲಂಘನೆ ಮಾಡಿದರೆ ಕ್ರಮ ಅನಿವಾರ್ಯ. ಕಾನೂನು ಬಿಟ್ಟು ಏನು ಮಾಡಲು ಸಾಧ್ಯವಿಲ್ಲ.



ಕಾನೂನು ಯಾರನ್ನೂ ಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್.ಎಚ್.ಅರುಣ್ ಕುಮಾರ್ ಮಾತನಾಡಿ, ಎಲ್ಲಾ ಭಾರೀ ವಾಹನ ಚಾಲಕರು, ವಾಹನ ತರಬೇತಿ ಚಾಲನ ಕೇಂದ್ರಗಳು, ಎಲ್ಲಾ ಇಲಾಖೆಗಳನ್ನು ಒಳಗೊಂಡಂತೆ ಕಾರ್ಯಕ್ರಮ ಆಯೋಜಿಸುತ್ತಿರುವುದು ಮಾದರಿ. ರಸ್ತೆ ಸುರಕ್ಷತಾ ಸಪ್ತಾಹ ಸಂದರ್ಭದಲ್ಲಿ ನಾವು ಕೇವಲ ವಾಹನ ಚಾಲನೆ ಮಾಡುವವರ ಕುರಿತು ಮತ್ತು ಕಾನೂನು ಉಲ್ಲಂಘನೆ ಕುರಿತು ಜಾಗೃತಿ ಮೂಡಿಸಿದರೆ ಸಾಕಾಗುವುದಿಲ್ಲ. ರಸ್ತೆಗಳ ಸುರಕ್ಷತೆ ಕಡೆಗೂ ಹೆಚ್ಚು ಗಮನ ಕೊಡಬೇಕಾಗಿದೆ. ಅವೈಜ್ಞಾನಿಕ ರಸ್ತೆ ತಡೆ, ಗುಂಡಿ ಬಿದ್ದ ರಸ್ತೆಗಳು, ರೀಪೇರಿಯಾಗದ ರಸ್ತೆಗಳಿಂದ ವಾಹನಗಳು ಅಪಘಾತಗಳು ಹೆಚ್ಚಾಗಿ ಸಂಭವಿಸುತ್ತಿವೆ. ಇದರ ಕಡೆಗೂ ಇಲಾಖೆಗಳು ಹೆಚ್ಚಿನ ಗಮ ಹರಿಸಬೇಕು. ಪ್ರತಿಷ್ಠಿತ ಬಡಾವಣೆಗಳಲ್ಲಿ ತ್ರಿಬಲ್ ರೈಡಿಂಗ್ ಸೇರಿದಂತೆ ಕಾನೂನು ಉಲ್ಲಂಘನೆ ಆಗುತ್ತಿರುವುದು ಕಂಡುಬರುತ್ತಿದೆ. ಇದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿದ್ದು, ಈ ಬಗ್ಗೆ ಸಂಬಂಧಪಟ್ಟ ಇಲಾಖೆ ಗಮನ ಹರಿಸಬೇಕೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮೋಟಾರು ವಾಹನ ನಿರೀಕ್ಷಕ ಮಹಮ್ಮದ್ ಖಾಲೀದ್, ಯಾವುದೇ ವಾಹನ ಚಾಲನೆಯನ್ನು ಯಾರೇ ಚಾಲನೆ ಮಾಡಲಿ ಅವರು ಕಡ್ಡಾಯವಾಗಿ ವಾಹನ ಚಾಲನಾ ಕಾನೂನನ್ನು ಪಾಲನೆ ಮಾಡಬೇಕು. ಯಂತ್ರದೊಂದಿಗೆ ಮಾನವ ಕೆಲಸ ಮಾಡಬೇಕಿದೆ. ತಂತ್ರಜ್ಞಾನ ಮುಂದಿವರೆದಂತೆ ಅತ್ಯಾಧುನಿಕ ತಂತ್ರಜ್ಞಾನ ಬಳಸಿ ವಾಹನಗಳನ್ನು ನಿರ್ಮಾಣ ಮಾಡಲಾಗುತ್ತದೆ. ಅದಕ್ಕೆ ತಕ್ಕಂತೆ ವಾಹನ ಸವಾರರು ತಮ್ಮ ಸ್ಥಿತಿಗತಿಗಳನ್ನು ಬದಲಾವಣೆ ಮಾಡಿಕೊಳ್ಳಬೇಕೆಂದು ಸಲಹೆ ನೀಡಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಮಥೇಶ್ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಆರ್‌ಟಿಓ ಇಲಾಖೆಯ ಅಧೀಕ್ಷಕ ಶಶಿಧರ್, ತಿಪ್ಪೇಶ್, ವೀರೇಶ್, ಸುರೇಶ ಇತರರು ಇದ್ದರು.



**ಚಳ್ಳಕೆರೆ ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಬೋವಿಸಮಾಜದ ವತಿಯಿಂದ ಏರ್ಪಡಿಸಿದ್ದ ಸಿದ್ದರಾಮೇಶ್ವರ ಜಯಂತಿಯಲ್ಲಿ ಶಾಸಕ ಟಿ.ರಘುಮೂರ್ತಿಯವರನ್ನು ಸನ್ಮಾನಿಸಲಾಯಿತು. ಕೆಪಿಸಿಸಿ ರಾಜ್ಯಪ್ರಧಾನಕಾರ್ಯದರ್ಶಿ ಎಂ. ರಾಮಪ್ಪ, ಜಗದೀಶ್, ಎಚ್.ಆಂಜನೇಯ, ವೆಂಕಟಪ್ಪ ಮೊದಲಾದವರು ಇದ್ದರು.**

## ಅನಂತಕುಮಾರ್ ಹೆಗಡೆ ಮೇಲೆ ಸೋಮೋಟೋ ಪ್ರಕರಣ ದಾಖಲಿಸಿ

**ಚಿತ್ರದುರ್ಗ:** ರಾಜ್ಯದ ಮುಖ್ಯಮಂತ್ರಿಗಳನ್ನು ಏಕ ವಚನದಲ್ಲಿ ಸಂಭೋದನೆ ಮಾಡಿರುವ ಸಂಸದ ಅನಂತಕುಮಾರ್ ಹೆಗಡೆಯವರ



ಮೇಲೆ ಸೋಮೋಟೋ ಪ್ರಕರಣವನ್ನು ದಾಖಲಿಸಿ ಅವರನ್ನು ಕೂಡಲೇ ಬಂಧಿಸುವಂತೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ರಾಮಪ್ಪ ನೇರ್ಲಗುಂಟೆ ಆಗ್ರಹಿಸಿದ್ದಾರೆ. ಚಿತ್ರದುರ್ಗಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಜ್ಜನ ರಾಜಕಾರಣಿ, ಮುತ್ಸದಿ, ಭಾಗ್ಯಗಳ ಸರದಾರ ದಾಸೋಹಿಗಳು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯರವರನ್ನು ಸಂಸದನಾದವನು ಏಕವಚನದಲ್ಲಿ ಸಂಭೋದನೆ ಮಾಡಿರುವುದು ಆತನ ಮನಸ್ಥಿತಿಯನ್ನು ತೋರಿಸುತ್ತದೆ. ನಾಲ್ಕು ವರ್ಷ ಅನಂತಕುಮಾರ್ ಹೆಗ್ಡೆ ಯಾವ ಮೂಲೆಯಲ್ಲಿದ್ದ ಸಿಎಂ, ಡಿಸಿಎಂ, ಬಗ್ಗೆ ಮಾತಾಡುವಾಗ ಎಚ್ಚರವಿರಲಿ ಅನಂತ್ ಕುಮಾರ್ ಹೆಗಡೆಗೆ ಬುದ್ದಿ ಭ್ರಮಣೆಯಾಗಿದೆ ಶಾಂತಿ ಕದಡುವ ಕೆಲಸ ಮಾಡ್ತಿದ್ದಾರೆ ಅನಂತ್‌ಕುಮಾರ್ ಹೆಗಡೆ ಸಭ್ಯತೆ ಮೈಗೂಡಿಸಿಕೊಳ್ಳಬೇಕು ಕೀಳು ಮಟ್ಟದ ರಾಜಕಾರಣವನ್ನು ಪ್ರದರ್ಶನ ಮಾಡಿದ್ದಾರೆ ಎಂದಿದ್ದಾರೆ.

**ಪ್ರಮುಖ ಸುದ್ದಿ**

**ಬೆಳೆವಿಮೆ ಪಾವತಿಯಾಗದೇ ಇದ್ದಲ್ಲಿ ಲೋಕಸಭಾ ಚುನಾವಣೆ ಬಹಿಷ್ಕಾರದ ನಿರ್ಧಾರ**

# ರೈತರ ಬೆಳೆವಿಮೆ ಪಾವತಿಗೆ ರೈತರಿಂದ ಜ.31 ಡೆಡ್‌ಲೈನ್

» **ಚಳ್ಳಕೆರೆ**

ತಾಲ್ಲೂಕು ಮಟ್ಟದ ರೈತರ ಕುಂದುಕೊರತೆ ಸಭೆಯನ್ನು ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಹಶೀಲ್ದಾರ್ ರೇಹಾನ್‌ಪಾಷ ಅಧ್ಯಕ್ಷತೆಯಲ್ಲಿ ಮಂಗಳವಾರ ಹಮ್ಮಿಕೊಂಡಿದ್ದು ಶಿರಸ್ತೆದಾರ್ ಸದಾಶಿವಪ್ಪ ತಹಶೀಲ್ದಾರ್ ಪರವಾಗಿ ಸಭೆಯ ನಡೆಸಿಕೊಟ್ಟರು.

ಪ್ರಾರಂಭದಲ್ಲಿ ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ಮಾಹಿತಿ ನೀಡಿ, ತಾಲ್ಲೂಕಿನಾದ್ಯಂತ ರೈತರ ಹಲವಾರು ಬಾರಿ ಬೆಳೆನಷ್ಟ ಪರಿಹಾರ ಹಾಗೂ ಬೆಳೆವಿಮೆ ಪಾವತಿ ಬಗ್ಗೆ ಹೋರಾಟ ನಡೆಸುತ್ತಾ ಬಂದಿದ್ದಾರೆ.

ಕೃಷಿ ಇಲಾಖೆ ಅಧಿಕಾರಿಗಳು ಸಹ ಮನವಿ ನೀಡಿದ್ದಾರೆ.

ರೈತರ ಪರವಾಗಿ ಸರ್ಕಾರ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಇಲಾಖೆಗೂ ಸಹ ಮನವಿ ಮಾಡಲಾಗಿದೆ.



ತಾಲ್ಲೂಕಿನಾದ್ಯಂತ ಒಟ್ಟು 31918 ರೈತರ 5.61 ಕೋಟಿ ಬೆಳೆ ವಿಮೆ ಹಣವನ್ನು ಈಗಾಗಲೇ ರಾಜ್ಯದ ಏಕೈಕ ಬೆಳೆ ವಿಮೆ ಕಂಪನಿ ಎಐಸಿಐಗೆ ಪಾವತಿಸಿದ್ದಾರೆ. ಮುಂಗಾರು ಬೆಳೆಯ ಜೊತೆಗೆ ಹಿಂಗಾರು ಬೆಳೆಯಾದ ಕಡಲೆ ಬೆಳೆಗೂ ಸಹ 250ಕ್ಕೂ ಹೆಚ್ಚು ರೈತರು ಬೆಳೆ ವಿಮೆ ಪಾವತಿಸಿದ್ದು ಒಟ್ಟು 2850 ಹೆಕ್ಟೇರ್ ಪ್ರದೇಶದಲ್ಲಿ ಕಡಲೆ ಬೆಳೆ ಇದೆ ಎಂದು ಮಾಹಿತಿ ನೀಡಿದರು.

ರೈತ ಸಂಘದ ರಾಜ್ಯ ಹಿರಿಯ ಉಪಾಧ್ಯಕ್ಷ ರೆಡ್ಡಿಹಳ್ಳಿ ವೀರಣ್ಣ ಮಾತನಾಡಿ, ಜ.31ರೊಳಗೆ ತಾಲ್ಲೂಕಿನ ಎಲ್ಲಾ ರೈತರಿಗೂ ಬೆಳೆ ವಿಮೆ ಬಾಕಿ ಜಮಾವಾಗಬೇಕು. ಈಗಾಗಲೇ ಖಾಸಗಿ ಬೆಳೆ ವಿಮೆ ಕಂಪನಿ ಹಲವಾರು ಬಾರಿ ರೈತರಿಗೆ ಸುಳ್ಳು ಆಶ್ವಾಸನೆ ನೀಡಿದ್ದು, ಮುಂದಿನ ದಿನಗಳಲ್ಲಿ ಬೆಳೆ ವಿಮೆಪಾವತಿಯಾಗದೇ ಇದ್ದಲ್ಲಿ ರೈತರು ಬೀದಿಗಿಳಿದು ಹೊರಾಟ ನಡೆಸುವ ಎಚ್ಚರಿಕೆ ನೀಡಿದರು.

ರೈತ ಸಂಘದ ಹಿರಿಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ ಮಾತನಾಡಿ, ಸರ್ಕಾರ ರೈತರ ತಾಳ್ಮೆಯನ್ನು ಪರೀಕ್ಷಿಸುತ್ತಿದೆ. ಖಾಸಗಿ ಬೆಳೆ ವಿಮೆ ಕಂಪನಿಗೆ 5.61 ಕೋಟಿ ಬೆಳೆ ವಿಮೆ ಹಣ ಪಾವತಿಯಾಗಿದ್ದರೂ ಈ ಬಗ್ಗೆ ಕೃಷಿ ಇಲಾಖೆ ಇದನ್ನು ಗಂಭೀರಾಗಿ ಪರಿಗಣಿಸಿಲ್ಲ. ಖಾಸಗಿ ಬೆಳೆ ವಿಮೆ ಕಂಪನಿಗಳು ರೈತರ ವಿರುದ್ದವಾಗಿ ಕಾರ್ಯನಿರ್ವಹಿಸುತ್ತಿದೆ ಎಂಬ ಭಾವನೆ ಮೂಡಿದೆ.

ಜ.31ರೊಳಗೆ ರೈತರಿಗೆ ಹಣ ಪಾವತಿಯಾಗದೇ ಇದ್ದಲ್ಲಿ ಲೋಕಸಭಾ ಚುನಾವಣೆಯನ್ನು ಬಹಿಷ್ಕರಿಸುವ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಶಿರಸ್ಥೇದಾರ್ ಸದಾಶಿವಪ್ಪ ಮಾಹಿತಿ ನೀಡಿ, ಜಿಲ್ಲಾಧಿಕಾರಿಗಳ ಸೂಚನೆಯಂತೆ ಇಂದು ಕೃಷಿ ಇಲಾಖೆ ಮತ್ತು ಖಾಸಗಿ ಬೆಳೆವಿಮಾ ಕಂಪನಿಯ ಪ್ರತಿನಿಧಿಯೊಂದಿಗೆ ರೈತರ ಕುಂದುಕೊರತೆ ಸಭೆ ನಡೆಸಲಾಗಿದೆ. ರೈತರು ನೀಡಿರುವ ಎಲ್ಲಾ ಮಾಹಿತಿಯನ್ನು ಮಾನ್ಯ ಜಿಲ್ಲಾಧಿಕಾರಿಗಳಿಗೆ ಕಳಿಸಿಕೊಡಲಾಗುವುದು. ಖಾಸಗಿ ಬೆಳೆವಿಮೆ ಕಂಪನಿ ರೈತರ ಖಾತೆಗೆ ಹಣ ಜಮಾಮಾಡುವ ಬಗ್ಗೆ ಕೂಡಲೇ ಕಾಯೋನ್ಮುಖವಾಗುವಂತೆ ನಿರ್ದೇಶನ ನೀಡಲಾಗುವುದು ಎಂದರು. ವಿಮಾಕಂಪನಿಯ ರಾಜ್ಯ ಪ್ರತಿನಿಧಿ ಅವಿತ್ ಹಾಗೂ ರೈತ ಮುಖಂಡರು ಸಭೆಯಲ್ಲಿ ಭಾಗವಹಿಸಿದ್ದರು.

**ಫಾಸ್ಟ್ ನ್ಯೂಸ್**

## ಕಾಟೇರ ಸಿನಿಮಾ ವೀಕ್ಷಿಸಿದ ಕಿಚ್ಚ ಸುದೀಪ್



ಕಾಟೇರ ಸಿನಿಮಾ ರಾಜ್ಯಾದ್ಯಂತ ಬಿಡುಗಡೆಯಾಗಿದೆ. ಇದೀಗ ಕಾಟೇರ ಸಿನಿಮಾ ಕಿಚ್ಚ ಸುದೀಪ್ ನೋಡಲಿದ್ದಾರೆ ಎನ್ನುವ ಸುದ್ದಿ ಹರಿದಾಡುತ್ತಿತ್ತು. ಅದೀಗ ನಿಜವಾಗಿದೆ. ಸುದೀಪ್ ಕಾಟೇರ ಸಿನಿಮಾವನ್ನು ವೀಕ್ಷಿಸಿದ್ದಾರೆ. ಈ ಮಾಹಿತಿಯನ್ನು ಸ್ವತಃ ಸುದೀಪ್ ಅವರೇ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ.ಈ ಹಿಂದೆ ನಡೆದ ಸೆಲೆಬ್ರಿಟಿ ಶೋಗೆ ಬರುವಂತೆ ಸುದೀಪ್ ಅವರಿಗೆ ಕಾಟೇರ ತಂಡದಿಂದ ಕರೆ ಹೋಗಿತ್ತು. ಕಿಚ್ಚ ಶೂಟಿಂಗ್ ನಲ್ಲಿ ಇರುವ ಕಾರಣದಿಂದಾಗಿ ಬರುವುದಕ್ಕೆ ಆಗಿರಲಿಲ್ಲ. ಆದರೆ ಅತೀ ಶೀಘ್ರದಲ್ಲೇ ಸಿನಿಮಾ ನೋಡುವುದಾಗಿ ಸುದೀಪ್ ಹೇಳಿದ್ದರು.

ಸಿನಿಮಾ ಬಿಡುಗಡೆ ಆದ ಮೊದಲ ವಾರದಲ್ಲೇ 100 ಕೋಟಿ ರೂಪಾಯಿ ಕ್ಲಬ್ ಸೇರಿತ್ತು. ಈ ಕುರಿತಂತೆ ದರ್ಶನ್ ಅಭಿಮಾನಿಗಳು ಪೋಸ್ಟ್ ಮಾಡಿದ್ದರು. 'ನಮ್ಮ ಕನ್ನಡ ಭಾಷೆಯಲ್ಲಿ ಮಾತ್ರ ಬಿಡುಗಡೆಯಾದ, ಮತ್ತು ಕರುನಾಡೆ ಮೆಚ್ಚಿದ ನಮ್ಮ ಕಾಟೇರ ಕೇವಲ ಒಂದು ವಾರದಲ್ಲಿ, 52 ಲಕ್ಷಕ್ಕೂ ಅಧಿಕ ಟಿಕೆಟ್ಸ್ ಸೋಲ್ಡ್ ಔಟ್ ಆಗಿ, 104 ಕೋಟಿಗೂ ಅಧಿಕ ಹಣವನ್ನುಗಳಿಸಿ ಎಲ್ಲಾ ದಾಖಲೆಗಳನ್ನು ಮುರಿದು. ಹೊಸ ದಾಖಲೆಯನ್ನು ಸ್ಥಾಪಿಸಿ ಯಶಸ್ವಿಯಾಗಿ ಮುನ್ನುಗ್ಗುತ್ತಿದೆ' ಎಂದು ಬರೆದುಕೊಂಡಿದ್ದರು.

## ವೃದ್ಧಾಶ್ರಮ ನಿವಾಸಿಗಳಿಗೆ ಹಣ್ಣುಗಳು ಹಾಗೂ ಎಳ್ಳುಬೆಲ್ಲದ ವಿತರಣೆ



» **ಹಿರಿಯೂರು**

ವರ್ಷದ ಮೊದಲ ಹಬ್ಬವಾದ ಸಂಕ್ರಾಂತಿ ಹಬ್ಬಕ್ಕೆ ವಾಸವಿ ಇಂಟರ್ ನ್ಯಾಷನಲ್ ಕ್ಲಬ್ ವತಿಯಿಂದ ಶುಭೋದಯ ವೃದ್ಧಾಶ್ರಮದ ನಿವಾಸಿಗಳಿಗೆ ಹಣ್ಣು-ಹಂಪಲು ಹಾಗೂ ಎಳ್ಳು-ಬೆಲ್ಲವನ್ನು ಕೊಟ್ಟು, ನಿವಾಸಿಗಳ ಮನಸ್ಸಿಗೆ ಹಬ್ಬದ ಸಂತಸವನ್ನು ನೀಡುತ್ತಿರುವುದು ನಿಜಕ್ಕೂ ಶ್ಲಾಘನೀಯ ಕಾರ್ಯವಾಗಿದೆ ಎಂಬುದಾಗಿ ವೃದ್ಧಾಶ್ರಮದ ಮುಖ್ಯಸ್ಥರಾದ ತೇಜೋಮೂರ್ತಿ ಹೇಳಿದರು. ತಾಲ್ಲೂಕಿನ ಭೀಮನಬಂಡೆ ಗ್ರಾಮದ ಶ್ರೀಶುಭೋದಯ ವೃದ್ಧಾಶ್ರಮದಲ್ಲಿ ವಾಸವಿ ಇಂಟರ್ ನ್ಯಾಷನಲ್ ಕ್ಲಬ್ ವತಿಯಿಂದ ಮಕರ ಸಂಕ್ರಾಂತಿ ಹಬ್ಬದ ಪ್ರಯುಕ್ತ ಆಶ್ರಮದ ನಿವಾಸಿಗಳಿಗೆ ಹಣ್ಣು-ಹಂಪಲು ಹಾಗೂ ಎಳ್ಳು-ಬೆಲ್ಲವನ್ನು ವಿತರಣೆ ಮಾಡಿ, ನಂತರ ಅವರು ಮಾತನಾಡಿದರು.ಈ ಸಂದರ್ಭದಲ್ಲಿ ವಾಸವಿ ಇಂಟರ್ ನ್ಯಾಷನಲ್ ಕ್ಲಬ್ ಸದಸ್ಯರುಗಳು ಹಾಗೂ ಶ್ರೀಶುಭೋದಯ ವೃದ್ಧಾಶ್ರಮದ ನಿವಾಸಿಗಳು ಉಪಸ್ಥಿತರಿದ್ದರು.

## ಕಾಂಗ್ರೆಸ್ ಆಡಳಿತದಿಂದ ಬೇಸತ್ತ ಜನರು ಜೆಡಿಎಸ್ ಸೇರ್ಪಡೆ: ಜಯಣ್ಣ



» **ಹಿರಿಯೂರು**

'ರಾಜ್ಯದಲ್ಲಿ ಮತ್ತೊಮ್ಮೆ ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಬೇಕು, ಜೆಡಿಎಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕು ಎಂಬ ಕಾರಣದಿಂದ ಹಲವು ಮುಖಂಡರು ಜೆಡಿಎಸ್ ಪಕ್ಷಕ್ಕೆ ಸೇರ್ಪಡೆ ಆಗುತ್ತಿದ್ದಾರೆ ಎಂಬುದಾಗಿ ಜೆಡಿಎಸ್ ಜಿಲ್ಲಾ ಘಟಕದ ಅಧ್ಯಕ್ಷರಾದ ಎಂ.ಜಯಣ್ಣ ಹೇಳಿದರು.

ನಗರದಲ್ಲಿ ಸೋಮವಾರದಂದು ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಹಲವರನ್ನು ಜೆಡಿಎಸ್ ಪಕ್ಷಕ್ಕೆ ಬರಮಾಡಿಕೊಂಡು ನಂತರ ಅವರು ಮಾತನಾಡಿದರು.'ಕುಮಾರಸ್ವಾಮಿ ರೈತರ ಸಾಲಮನ್ನಾ ಮಾಡಿದ್ದರು. ಆದರೆ, ಸಿದ್ದರಾಮಯ್ಯ ಆವರು ಬರದಿಂದ ಕಂಗೆಟ್ಟ ರೈತರಿಗೆ ಪರಿಹಾರ ರೂಪದಲ್ಲಿ 2000 ಕೊಡುತ್ತೇವೆ ಎಂದು ಅದನ್ನೂ ಕೊಟ್ಟಿಲ್ಲ. ರಾಜ್ಯದಲ್ಲಿ ಸರ್ಕಾರದ ಬಿಟ್ಟಿಗ್ಯಾರಂಟಿಗಳ ಹೆಸರಿನಲ್ಲಿ ರಾಜ್ಯದ ಅಭಿವೃದ್ಧಿ ಸಂಪೂರ್ಣ ಸ್ಥಗಿತವಾಗಿದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T